# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 81 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 05–10–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 81 | Title- Code: KARKAN 28269 | Chitradurga | Date: 05-10-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕರುನಾಡ ವಿಜಯಸೇನೆಯಿಂದ ಶಾಸಕರು, ಡಿಸಿಗೆ ಮನವಿ 2

ಡಿಸಿಸಿ ಬ್ಯಾಂಕಿಗೆ ರಾಷ್ಟ್ರಮಟ್ಟದಲ್ಲಿ 2ನೇ ಬಹುಮಾನ: ಸಚಿವ ಸುಧಾಕರ್ 3

ಮಕ್ಕಳು, ತಾಯಂದಿರ ಮರಣ ಪ್ರಮಾಣ ತಗ್ಗಿಸಲು ಸೂಚನೆ 4



ಸುದ್ದಿ, ಜಾಹಿರಾತಿಗೆ 9686622252


## ತಾಲ್ಲೂಕು ಮಟ್ಟದ ಜನತಾದರ್ಶನ


### 158 ಹಳ್ಳಿಗಳಿಗೆ ವಿವಿ ಸಾಗರದಿಂದ ಶುದ್ಧ ಕುಡಿಯುವ ನೀರು ಕಾಮಗಾರಿಗೆ ಶೀಘ್ರ ಚಾಲನೆ: ಶಾಸಕ ವೀರೇಂದ್ರ ಪಪ್ಪಿ


» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ 158 ಗ್ರಾಮಗಳಿಗೆ ವಾಣಿವಿಲಾಸ ಸಾಗರ ಜಲಾಶಯದಿಂದ ಶುದ್ಧ ಕುಡಿಯುವ ನೀರು ಪೂರೈಸುವ ಕಾಮಗಾರಿಗೆ ಶೀಘ್ರವೇ ಚಾಲನೆ ನೀಡಲಾಗುವುದು ಎಂದು ಶಾಸಕ ಕೆ.ಸಿ. ವೀರೇಂದ್ರ ಪ್ಪಪಿ ಅವರು ಹೇಳಿದರು.

ನಗರದ ತ.ರಾ.ಸು ರಂಗಮಂದಿರದಲ್ಲಿ ಬುಧುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ನಗರ ಸಭೆ ವತಿಯಿಂದ ಆಯೋಜಿಸಲಾದ ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ,ಸಾರ್ವಜನಿಕರಿಂದಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ತಾಲ್ಲೂಕಿನ 158 ಹಳ್ಳಿಗಳಿಗೆ ವಾಣಿ ವಿಲಾಸ ಸಾಗರದಿಂದ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವ ಕಾಮಗಾರಿಗೆ ಶೀಘ್ರವೇ ಚಾಲನೆ ನೀಡಿ, ಕುಡಿಯುವ ನೀರಿನ ಬವಣೆಗೆ ಮುಕ್ತಿ ಹಾಡಲಾಗುವುದು. ತಾಲ್ಲೂಕಿನ ಎಲ್ಲ ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಹಳ್ಳಿಗಳಲ್ಲಿನ ಚರಂಡಿಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸಲು ಈಗಾಗಲೆ ಸೂಚನೆ ನೀಡಲಾಗಿದೆ. ಚರಂಡಿಗಳ ಸ್ವಚ್ಛತೆ ಬಳಿಕ, ಗ್ರಾಮಸ್ಥರು ಪುನಃ ಚರಂಡಿಗಳಿಗೆ ಕಸವನ್ನು ಸುರಿಯಬಾರದು, ಹೀಗಾದಲ್ಲಿ ಚರಂಡಿ ನೀರು ಕಟ್ಟಿಕೊಂಡು, ನೀರು ನಿಂತು ಸಾಂಕ್ರಾಮಿಕ ರೋಗಗಳಿಗೆ ಕಾರಣವಾಗುತ್ತದೆ. ಗ್ರಾಮಗಳ ಸ್ವಚ್ಛತೆಯಲ್ಲಿ ಜನರೂ ಕೂಡ ತಮ್ಮ ಜವಾಬ್ದಾರಿಯನ್ನು ಅರಿತು, ನೈರ್ಮಲ್ಯ ಕಾಪಾಡಿಕೊಳ್ಳಲು ಸಹಕರಿಸಬೇಕು, ಗ್ರಾಮದ ಯುವಕರು ಈ ನಿಟ್ಟಿನಲ್ಲಿ ಜನರಲ್ಲಿ ಅರಿವು ಮೂಡಿಸಬೇಕು ಎಂದರು. ನಗರಕ್ಕೆ ಹೊಂದಿಕೊಂಡಿರು ಮಲ್ಲಾಪುರ ಕೆರೆ ಸ್ವಚ್ಛಗೊಳಿಸಲಾಗುವುದು ಎಂದರು.




ಮುಖ್ಯಮಂತ್ರಿ ಸಿದ್ದರಾಮಯ್ಯನವರ ದೂರದೃಷ್ಟಿ ಫಲವಾಗಿ ಸರ್ಕಾರಿ ಅಧಿಕಾರಿಗಳೇ ಜನರ ಬಳಿಗೆ ತೆರಳಿ ಅಹವಾಲುಗಳನ್ನು ಆಲಿಸುವಂತೆ ಆಗಿದೆ. ಜನತಾ ದರ್ಶನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಶೀಲಿಸಿ ತಡಮಾಡದೆ ತಕ್ಷಣವೇ ಕ್ರಮ ಕೈಗೊಳ್ಳಲಾಗುವುದು. 3 ತಿಂಗಳ ನಂತರ ಚಿತ್ರದುರ್ಗ ತಾಲೂಕಿಗೆ ಸಂಬಂಧಿಸಿದಂತೆ ನಡೆಯುವ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಇಂದು ಸಲ್ಲಿಸಿದ ಅರ್ಜಿಗಳಿಗೆ ಪರಿಹಾರ ದೊರಕದಿದ್ದರೆ ಜನಪ್ರತಿನಿಧಿಗಳ ಗಮನಕ್ಕೆ ತರಬಹದು. ಜನತಾದರ್ಶನ ನಡೆಯುವ ಕುರಿತು ಪ್ರತಿ ಹಳ್ಳಿ ಹಳ್ಳಿಗಳಲ್ಲಿ ಈ ಕುರಿತು ಹೆಚ್ಚಿನ ಪ್ರಚಾರವನ್ನು ಅಧಿಕಾರಿಗಳು ನೀಡಬೇಕು. ಇಂದು ಜರುಗಿದ ಜನತಾ ದರ್ಶನದಲ್ಲಿ ನಾಗರಿಕ, ವೈಯಕ್ತಿಕ ಹಾಗೂ ಗ್ರಾಮಗಳ ಸಮಸ್ಯೆಗಳನ್ನು ಕುರಿತು ಜನರು ಅಹವಾಲು ಸಲ್ಲಿಸಿದ್ದಾರೆ. ಇವುಗಳನ್ನು ಶೀಘ್ರ ಬಗೆಹರಿಸಲು ಪ್ರಯತ್ನಿಸಲಾಗುವುದು ಎಂದರು. ಈ ಹಿಂದೆ ಚಿತ್ರದುರ್ಗ ತಾಲೂಕಿನಲ್ಲಿ ಪರಿಶಿಷ್ಟ ಜಾತಿ/ ಪ.ವರ್ಗದವರಿಗೆ ಮಂಜೂರು ಮಾಡಿದ್ದ 822 ಮನೆಗಳ ನಿರ್ಮಾಣ ಕಾರ್ಯ ಸ್ಥಗಿತಗೊಂಡಿತ್ತು, ಆದರೆ ಇದೀಗ ನಿರ್ಮಾಣ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಬರಗಾಲದ ಹಿನ್ನಲೆಯಲ್ಲಿ ಗ್ರಾಮೀಣ ಭಾಗದಿಂದ ವಲಸೆ ತಪ್ಪಿಸಲು ಮನರೇಗಾದಡಿ 150 ದಿನಗಳ ಕೆಲಸ ನೀಡಲಾಗುತ್ತಿದೆ. ಇದರ ಅಡಿ ರೈತರು ಜಮೀನುಗಳಿಗೆ ಬದುಗಳನ್ನು ನಿರ್ಮಿಸಿಕೊಳ್ಳಬಹುದು ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರದ ಆದೇಶದಂತೆ ಸೆ.25 ರಂದು ಹಿರಿಯೂರಿಲ್ಲಿ ಜಿಲ್ಲಾಮಟ್ಟದಜನತಾದರ್ಶನಕಾರ್ಯಕ್ರಮ ಆಯೋಜಿಸಲಾತ್ತು. 15 ದಿನಗಳಿಗೊಮ್ಮೆ ತಾಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಆಯೋಜಿಸಲಾಗುವುದು. ಜನರು ವಿವಿಧ ಕಡೆಗಳಿಂದ ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ಕಚೇರಿಗೆ ಬಂದು ಅಹವಾಲು ಸಲ್ಲಿಸುತ್ತಾರೆ. ಸ್ವೀಕರಿಸಿದ ಜನರ ಅಹವಾಲುಗಳನ್ನು ವಿಳಂಬ ಮಾಡದೇ ತಕ್ಷಣವೇ ಪರಿಹಾರ ನೀಡಲಾಗುವುದು.


ಪುಟ ↘ 3


ಫಾಸ್ಟ್ ನ್ಯೂಸ್

### ಸುಮಾರು 50 ಸಾವಿರ ಮೌಲ್ಯದ ಮೆಕ್ಕೆಜೋಳ ಬಣವೆ ಬೆಂಕಿಗೆ ಆಹುತಿ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಹೊನ್ನೂರು ಗ್ರಾಮದ ಯಲ್ಲಪ್ಪ ಎಂಬುವವರಿಗೆ ಸೇರಿದ ಮೆಕ್ಕೆಜೋಳದ ಸಪ್ಪೆ ಬಣವೆಗೆ ಆಕಸ್ಮಿಕ ಬೆಂಕಿ ಬಿದ್ದು ಬಣವೆ ಸಂಪೂರ್ಣ ಸುಟ್ಟು ಹೋಗಿ ಸುಮಾರು 50 ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಮಂಗಳವಾರ ಬೆಳಗ್ಗೆ ಈ ಘಟನೆ ನಡೆಸಿದ್ದು, ಬೆಂಕಿ ಬಿದ್ದ ಕೂಡಲೇ ಗ್ರಾಮಸ್ಥರು ಅಗ್ನಿಶಾಮಕ ಠಾಣೆಗೆ ಮಾಹಿತಿ ನೀಡಿದ್ದು, ಅಗ್ನಿಶಾಮಕ ವಾಹನ ಆಗಮಿಸಿ ಬೆಂಕಿಯನ್ನು ಹತೋಟಿಗೆ ತರುವಷ್ಟರಲ್ಲಿ ಸುಮಾರು ಎಂಟು ಲೋಡ್ ಮೆಕ್ಕೆಜೋಳದ ಸಪ್ಪೆ ಸಂಪೂರ್ಣ ಬೆಂಕಿಗೆ ಆಹುತಿಯಾಗಿದೆ. ತಹಶೀಲ್ದಾರ್‌ರವರ ಸೂಚನೆ ಮೇರೆಗೆ ಗ್ರಾಮ ಲೆಕ್ಕಿಗ ರಂಗನಾಥ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ನೀಡಿದ್ದಾರೆ.

## ಬೇಡಿಕೆ ಈಡೇರಿಕೆಗಾಗಿ ಅಂಚೆ ನೌಕರರ ಪ್ರತಿಭಟನೆ

» ಚಿತ್ರದುರ್ಗ

ಕೋಟೆ ರಸ್ತೆ ಫಿಲ್ಟರ್‌ಹೌಸ್ ಸಮೀಪವಿರುವ ಅಂಚೆ ಕಚೇರಿ ಎದುರು ನೌಕರರು ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಒಂದು ದಿನದ ಧರಣಿ ನಡೆಸಿದರು. ಗ್ರಾಮೀಣ ಅಂಚೆ ನೌಕರರ ಜಂಟಿ ಕ್ರಿಯಾ ಸಮಿತಿ ಚಿತ್ರದುರ್ಗ ವಿಭಾಗದ ಅಂಚೆ ನೌಕರರು ಎನ್.ಯು.ಜಿ.ಡಿ.ಎಸ್. ಎ.ಐ.ಜಿ.ಡಿ.ಎಸ್.ಯು. ಸಂಘಟನೆಗಳು ಜೆ.ಸಿ.ಎ.ರೂಪಿಸಿಕೊಂಡು ನ್ಯಾಯಯುತವಾದ ಬೇಡಿಕೆಗಳ ಈಡೇರಿಕೆಗೆ ಅನೇಕ ಹೋರಾಟಗಳನ್ನು ಮಾಡಿಕೊಂಡು ಬರುತ್ತಿದ್ದು, ಇದುವರೆವಿಗೂ ಯಾವುದೂ ಈಡೇರಿಲ್ಲ.

ಎಂಟು ಗಂಟೆಗಳ ಕೆಲಸ ಮತ್ತು ಪಿಂಚಣಿ ಸೇರಿದಂತೆ ಎಲ್ಲಾ ಸವಲತ್ತುಗಳನ್ನು ನೀಡಬೇಕು.




ಸೇವಾ ಹಿರಿತನದ ಆಧಾರದ ಮೇಲೆ 12–24–36 ವರ್ಷಗಳ ಸೇವೆ ಸಲ್ಲಿಸಿದ ಜಿ.ಡಿ.ಎಸ್.ನೌಕರರಿಗೆ ವಿಶೇಷ ಇನ್‌ಕ್ರಿಮೆಂಟ್ ನೀಡಬೇಕು.


ಪುಟ ↘ 2


ಪ್ರಮುಖ ಸುದ್ದಿ

### ಅ. 06, 07 ರಂದು ಹಿರಿಯೂರು ಬಬ್ಬೂರು ಕೃಷಿ ಫಾರಂ ಶತಮಾನೋತ್ಸವದ ಸಂಭ್ರಮಾಚರಣೆ

## ಸಿಎಂ ಸಿದ್ಧರಾಮಯ್ಯ ಉದ್ಘಾಟನೆ

### ತಳಿ ಸಂವರ್ಧನೆ, ಬೇಸಾಯ ಕ್ರಮ ಹಾಗೂ ಕೃಷಿ ತಾಂತ್ರಿಕತೆಯಲ್ಲಿ ಸಂಶೋಧನೆ ಕೇಂದ್ರ ಕೊಡುಗೆ ಅಪಾರ: ಕುಲಪತಿ ಡಾ.ಆರ್.ಸಿ.ಜಗದೀಶ್

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಬಬ್ಬೂರು ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ಮಧ್ಯ ಕರ್ನಾಟಕ ಭಾಗದ ರೈತರ ಆಶಾಕಿರಣವಾಗಿ, ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ತಳಿ ಸಂವರ್ಧನೆ, ಬೇಸಾಯ ಕ್ರಮ ಹಾಗೂ ಕೃಷಿ ತಾಂತ್ರಿಕತೆ ಅಭಿವೃದ್ಧಿಯಲ್ಲಿ ಸಂಶೋಧನೆ ಕೈಗೊಂಡು ನಾಡಿಗೆ ಕೊಡುಗೆ ನೀಡುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅ. 06 ರಂದು ಬಬ್ಬೂರು ಫಾರಂ ಗೆ ಆಗಮಿಸಿ, ಶತಮಾನೋತ್ಸವ ಸಮಾರಂಭ ಉದ್ಘಾಟಿಸಲಿದ್ದಾರೆ ಎಂದು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಆರ್.ಸಿ.ಜಗದೀಶ್ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಈ ಕುರಿತು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

1916ರಲ್ಲಿ ಸ್ಥಾಪನೆಯಾದ ಈ ಸಂಶೋಧನಾ ಕೇಂದ್ರವು 2016 ರಲ್ಲಿ ಶತಮಾನೋತ್ಸವ ಪೂರೈಸಿದೆ. ಬಬ್ಬೂರು ಫಾರಂನಲ್ಲಿ ಶತಮಾನೋತ್ಸವ ನೆನಪಿಗಾಗಿ ನಿರ್ಮಿಸಲಾಗಿರುವ ಶತಮಾನ ಭವನ ಲೋಕಾರ್ಪಣೆಮಾಡಲಿರುವಮುಖ್ಯಮಂತ್ರಿ



ಸಿದ್ಧರಾಮಯ್ಯನವರು, ಸಿರಿಧಾನ್ಯ ಮೇಳ ಮತ್ತು ತೋಟಗಾರಿಕೆ ಬೆಳೆಗಳ ವಿಚಾರ ಸಂಕಿರಣಕ್ಕೂ ಚಾಲನೆ ನೀಡುವರು.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಕೃಷಿ ಸಂಶೋಧನಾ ಕೇಂದ್ರದಿಂದ ಹೊರತರಲಾಗಿರುವ ಕೃಷಿ ಪ್ರಕಟಣೆಗಳನ್ನು ಬಿಡುಗಡೆ ಮಾಡುವರು. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಡಿ.ಸುಧಾಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಸ್ಮರಣ ಸಂಚಿಕೆ ಹಾಗೂ ಭೂ ವಿಜ್ಞಾನ, ಗಣಿಗಾರಿಕೆ ಮತ್ತು ತೋಟಗಾರಿಕೆ ಇಲಾಖೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಹಸ್ತ ಪ್ರತಿಗಳನ್ನು ಬಿಡುಗಡೆ ಮಾಡುವರು. ಜಿಲ್ಲೆಯ ಎಲ್ಲಾ ಶಾಸಕರು, ಸ್ಥಳೀಯ ಜನಪ್ರತಿನಿಧಿಗಳು, ರಾಜ್ಯದ ವಿವಿಧ ಕೃಷಿ ಹಾಗೂ ತೋಟಗಾರಿಕೆ ವಿಶ್ವ ವಿದ್ಯಾಲಯಗಳ ಕುಲಪತಿಗಳು, ಜಿಲ್ಲೆಯ ಹಿರಿಯ ಅಧಿಕಾರಿಗಳು, ಸಂಶೋಧನಾ ಕೇಂದ್ರದ ವ್ಯವಸ್ಥಾಪನ ಮಂಡಳಿ ಸದಸ್ಯರು, ಸಂಶೋಧನಾ ಕೇಂದ್ರ ಅಧಿಕಾಗಳು ಹಾಗೂ ಕೃಷಿಕ ಸಮಾಜ ಅಧ್ಯಕ್ಷರು, ಸದಸ್ಯರು ಹಾಗೂ ಪ್ರಗತಿಪರ ರೈತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಕುಲಪತಿ ಡಾ.ಆರ್.ಸಿ.ಜಗದೀಶ್ ತಿಳಿಸಿದರು.


ಪುಟ ↘ 2





## ಫಾಸ್ಟ್ ನ್ಯೂಸ್

### ಬೇಡಿಕೆ ಈಡೇರಿಕೆಗಾಗಿ ಅಂಚೆ ನೌಕರರ ಪ್ರತಿಭಟನೆ

» ಮೊದಲ ಪುಟದಿಂದ

ಅವೈಜ್ಞಾನಿಕ ಗುರಿ ನೀಡಿ ಮೇಳಗಳನ್ನು ನಡೆಸುತ್ತಿರುವುದನ್ನು ನಿಲ್ಲಿಸಬೇಕು. ಗ್ರೂಪ್ ಇನ್ಸುರೆನ್ಸ್ ಕವರೇಜ್ ರೂ. ಐದು ಲಕ್ಷದವರೆಗೆ ಹೆಚ್ಚಿಸಬೇಕು. ಜಿ.ಡಿ.ಎಸ್.ಗ್ರಾಚ್ಯುಟಿ ಹಣವನ್ನು ರೂ.ಐದು ಲಕ್ಷದವರೆಗೆ ಏರಿಸಬೇಕು. 180 ದಿನಗಳ ರಜೆ ಉಳಿಸಿಕೊಳ್ಳಲು ಅವಕಾಶ ಕಲ್ಪಿಸಬೇಕು. ಜಿ.ಡಿ.ಎಸ್.ಮತ್ತು ಅವರ ಕುಟುಂಬದ ಸದಸ್ಯರಿಗೆ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವಂತೆ ಧರಣಿ ನಿರತ ಅಂಚೆ ನೌಕರರು ಆಗ್ರಹಿಸಿದರು. ಜನಾರ್ಧನ, ದಾದಾಪೀರ್, ತುಕಾರಾಂ, ಶಾಂತಕುಮಾರ್, ವಿಜಯಕುಮಾರ್, ರಾಜಣ್ಣ, ಪ್ರಕಾಶ್, ಲೋಕೇಶ್, ತಿಮ್ಮಾರೆಡ್ಡಿ ಸೇರಿದಂತೆ ನೂರಾರು ನೌಕರರು ಧರಣಿಯಲ್ಲಿ ಪಾಲ್ಗೊಂಡಿದ್ದರು.

### ಶಾಮನೂರು ಹೇಳಿಕೆ ಹಾಸ್ಯಾಸ್ಪದ: ಬಿಎಸ್‌ಪಿ

» ಚಿತ್ರದುರ್ಗ

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದಲ್ಲಿ ಲಿಂಗಾಯಿತರನ್ನು ಮೂಲೆಗುಂಪು ಮಾಡಲಾಗಿದೆ. ಅಧಿಕಾರಿಗಳದ್ದು, ನಾಯಿಪಾಡು ಎಂದು ಮಾಜಿ ಮಂತ್ರಿ ದಾವಣಗೆರೆ ಶಾಸಕ ವೀರಶೈವ ಲಿಂಗಾಯಿತ ಮಹಾಸಭಾದ ಮುಖಂಡ ಶಾಮನೂರು ಶಿವಶಂರಪ್ಪ ಹೇಳಿಕೆ ನೀಡಿರುವುದು ಹಾಸ್ಯಾಸ್ಪದ ಎಂದು ಬಹುಜನ ಸಮಾಜ ಪಾರ್ಟಿಯ ಜಿಲ್ಲಾಧ್ಯಕ್ಷ ಎನ್.ಪ್ರಕಾಶ್ ಟೀಕಿಸಿದ್ದಾರೆ. ಕರ್ನಾಟಕದಲ್ಲಿ ನಿಜವಾಗಿಯೂ ಶೋಷಣೆಗೊಳಗಾಗಿ ಮೂಲೆಗುಂಪಾಗಿರುವುದು ಎಸ್ಸಿ.ಎಸ್ಟಿ, ಹಿಂದುಳಿದ ವರ್ಗದವರು. ರಾಜ್ಯದಲ್ಲಿ ಇದುವರೆವಿಗೂ ಹದಿಮೂರು ಬಾರಿ ಲಿಂಗಾಯಿತ ಸಮಾಜದವರು ಮುಖ್ಯಮಂತ್ರಿಗಳಾಗಿದ್ದಾರೆ. ಮಂತ್ರಿಮಂಡಲದಲ್ಲಿಯೂ ಪ್ರಭಾವಿ ಖಾತೆಗಳಲ್ಲಿ ಬಹುಪಾಲು ಲಿಂಗಾಯಿತ ಸಮಾಜದವರೆ ಇದ್ದಾರೆ. ಮಠಮಾನ್ಯಗಳಿಗೆ ಸಾವಿರಾರು ಎಕರೆ ಜಮೀನು ಮಂಜೂರು ಮಾಡಲಾಗಿದೆ. ಖಾಸಗಿ ವಿದ್ಯಾಸಂಸ್ಥೆ, ಮೆಡಿಕಲ್ ಕಾಲೇಜು, ಇಂಜಿನಿಯರಿಂಗ್, ಪದವಿ ಕಾಲೇಜುಗಳಿವೆ. ಆಯಕಟ್ಟಿನ ಹುದ್ದೆಗಳಲ್ಲಿ ಲಿಂಗಾಯಿತರೆ ಜಾಸ್ತಿಯಿದ್ದಾರೆ. ಆದರೂ ಶಾಮನೂರು ಶಿವಶಂಕರಪ್ಪನವರು ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಲಿಂಗಾಯಿತರನ್ನು ಮೂಲೆಗುಂಪು ಮಾಡಲಾಗಿದೆ ಎಂದು ಹೇಳಿರುವುದರಲ್ಲಿ ಅರ್ಥವಿಲ್ಲ ಎಂದು ಎನ್.ಪ್ರಕಾಶ್ ಖಂಡಿಸಿದ್ದಾರೆ.


### ಲೋಕಾಯುಕ್ತ ಪೋಲೀಸ್ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ದಾವಣಗೆರೆ

ಕರ್ನಾಟಕಲೋಕಾಯುಕ್ತಪೊಲೀಸ್ ಅಧಿಕಾರಿಗಳು ಅ.11 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ತುಂಗಾಭದ್ರಾ ಸಭಾಂಗಣದ ಕಂದಾಯ ಭವನದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದು, ಸಾರ್ವಜನಿಕರು ತಮ್ಮ ದೂರುಗಳನ್ನು ಸಲ್ಲಿಸಬಹುದು.. ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಅ.11 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ತುಂಗಾಭದ್ರಾ ಸಭಾಂಗಣದ ಕಂದಾಯ ಭವನದಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ತಮ್ಮ ದೂರು ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು.

# ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕರುನಾಡ ವಿಜಯಸೇನೆಯಿಂದ ಶಾಸಕರು, ಜಿಲ್ಲಾಧಿಕಾರಿಗೆ ಮನವಿ

» ಚಿತ್ರದುರ್ಗ




ಪ್ರವಾಸಿ ಮಂದಿರದಿಂದ ಹೊಳಲ್ಕೆರೆ ರಸ್ತೆ ಕನಕವೃತ್ತದವರೆಗೂ ಎರಡು ಬದಿಗಳಲ್ಲಿ ರಸ್ತೆ ಅಗಲೀಕರಣಗೊಳಿಸಿ ಪಾದಚಾರಿಗಳು, ವಯೋವೃದ್ದರು, ಮಕ್ಕಳು, ಮಹಿಳೆಯರು ಓಡಾಡಲು ಫುಟ್‌ಪಾತ್‌ಗಳನ್ನು ನಿರ್ಮಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರುನಾಡ ವಿಜಯಸೇನೆ ವತಿಯಿಂದ ತ.ರಾ.ಸು. ರಂಗಮಂದಿರದಲ್ಲಿ ಬುಧವಾರ ನಡೆದ ತಾಲ್ಲೂಕು ಮಟ್ಟದ ಜನತಾದರ್ಶನದಲ್ಲಿ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಹಾಗೂ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ನಗರದ ಕೆಲವು ಭಾಗಗಳಲ್ಲಿ ಶುದ್ದ ಕುಡಿಯುವ ನೀರಿನ ಘಟಕಗಳು ಕೆಟ್ಟು ಹೋಗಿದ್ದು, ಗಾಂಧಿನಗರ, ನೆಹರುನಗರ, ಜೋಗಿಮಟ್ಟಿರಸ್ತೆ ಇನ್ನಿತರೆ ಕಡೆ ಕುಡಿಯುವ ನೀರಿನ ಘಟಕಗಳನ್ನು ತುರ್ತಾಗಿ ರಿಪೇರಿ ಮಾಡಿಸಬೇಕು.

ಗಾಂಧಿವೃತ್ತದಲ್ಲಿ ಗಾಂಧಿ ಪ್ರತಿಮೆ ಪ್ರತಿಷ್ಠಾಪಿಸಿ. ವೃತ್ತವನ್ನು ವಿಶಾಲಗೊಳಿಸಬೇಕು. ಕೆಳಗೋಟೆಯ ಬಸವೇಶ್ವರ ಸರ್ಕಲ್‌ನಲ್ಲಿ ಬಸವಣ್ಣನವರ ಪುತ್ಥಳಿ ನಿರ್ಮಾಣವಾಗಬೇಕು. ತ.ರಾ.ಸು.ರಂಗಮಂದಿರದ ಹೊರ ಭಾಗದಲ್ಲಿ ತಾಯಿ ಕನ್ನಡ ಭುವನೇಶ್ವರಿ ಪ್ರತಿಮೆಯಿರಿಸಬೇಕು.

ನಗರದಿಂದ ಸುತ್ತಮುತ್ತಲ ಹಳ್ಳಿಗಳಿಗೆ ಹೋಗುವ ರಸ್ತೆಯ ಎರಡು ಬದಿಗಳಲ್ಲಿ ಅಲ್ಲಲ್ಲಿ ಬಳ್ಳಾರಿ ಜಾಲಿ ಗಿಡ ಗಂಟೆಗಳು ಬೆಳೆದಿರುವುದರಿಂದ ದ್ವಿಚಕ್ರ ವಾಹನ ಸವಾರರಿಗೆ, ಆಟೋರಿಕ್ಷಾದವರಿಗೆ ಇನ್ನಿತರೆ ವಾಹನಗಳಿಗೆ ತೊಂದರೆಯಾಗುತ್ತಿದೆ. ಕೂಡಲೆ ತೆರವುಗೊಳಿಸಬೇಕು. ನಗರದ ಎಲ್ಲಾ ಉದ್ಯಾನವನಗಳ ಅಭಿವೃದ್ದಿ ನೆಪದಲ್ಲಿ ನಗರಸಭೆ ಹಾಗೂ ನಗರಾಭಿವೃದ್ದಿ ಪ್ರಾಧಿಕಾರದವರು ಹಣ ದುರುಪಯೋಗ ಪಡಿಸಿಕೊಳ್ಳುತ್ತಿದ್ದು, ಕೂಡಲೆ ಕ್ರಮ ವಹಿಸಿ ಅಂತಹ ಅಧಿಕಾರಿಗಳ ವಿರುದ್ದ ಕಾನೂನು ರೀತಿಯ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕೆಂದು ಶಾಸಕರಲ್ಲಿ ಆಗ್ರಹಿಸಿದರು.

ನಗರದ ಹೊರಭಾಗದ ವಿಶಾಲವಾದ ಜಾಗದಲ್ಲಿ ಮೆಡಿಕಲ್ ಕಾಲೇಜು ನಿರ್ಮಾಣ ಮಾಡಿ ಕಾಲೇಜಿಗೆ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಹೆಸರಿಡಬೇಕು.

ಜಿಲ್ಲಾಸ್ಪತ್ರೆಯನ್ನು ಎಲ್ಲಿಗೂ ಸ್ಥಳಾಂತರಿಸಬಾರದು. ರಾಜಕಾಲುವೆಗಳ ಮೇಲೆ ಅಕ್ರಮವಾಗಿ ಕಟ್ಟಡಗಳನ್ನು ಕಟ್ಟಿಕೊಂಡಿರುವುದನ್ನು ತೆರವುಗೊಳಿಸಿ ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ನಗರದ ಕೆಲವು ಕಡೆ ಅವೈಜ್ಞಾನಿಕವಾಗಿ ಹಂಪ್ಸ್‌ಗಳನ್ನು ಅಳವಡಿಸಿರುವುದನ್ನು ತೆಗೆದು ಸಂಚಾರ ದಟ್ಟಣೆಯಿರುವ ಕಡೆ ಮಾತ್ರ ಅಳವಡಿಸತಕ್ಕದ್ದು. ಆರರಂದು ಚಿತ್ರದುರ್ಗ ಜಿಲ್ಲೆಗೆ ಆಗಮಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕವಾಡಿಗರಹಟ್ಟಿಗೆ ಭೇಟಿ ನೀಡಿ ಅಲ್ಲಿನ ಸಂತ್ರಸ್ಥರ ಸಮಸ್ಯೆಗಳನ್ನು ಆಲಿಸಿ ಅಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸುವಂತೆ ಸಂಬಂಧಪಟ್ಟವರಿಗೆ ಸೂಚಿಸಬೇಕು. ನಗರದಲ್ಲಿ ಕೆಲವು ಕಡೆ ರಸ್ತೆ ಕಾಮಗಾರಿ ಅಪೂರ್ಣವಾಗಿದ್ದು, ತುರ್ತಾಗಿ ಕಾಮಗಾರಿಯನ್ನು ಮುಗಿಸಬೇಕು. ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿಯನ್ನು ಪ್ರಕಟಿಸುವಲ್ಲಿ ಈಗಾಗಲೆ ವಿಳಂಭವಾಗಿದ್ದು, ಕೂಡಲೆ ಮೀಸಲಾತಿಯನ್ನು ಪ್ರಕಟಿಸಿ ಚುನಾಯಿತ ಪ್ರತಿನಿಧಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡಲು ಅವಕಾಶ ಕೊಡಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಶಾಸಕರಲ್ಲಿ ವಿನಂತಿಸಿದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಕಾರ್ಯದರ್ಶಿ ಜಗದೀಶ್, ರತ್ನಮ್ಮ, ಪ್ರದೀಪ್, ಅವಿನಾಶ್, ಅಭಿಷೇಕ್, ಕೋಟೇಶ್, ಸುರೇಶ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಸಾಂಕ್ರಾಮಿಕ ರೋಗ ನಿರ್ಮೂಲನೆಗೆ ಆದ್ಯತೆ

» ಚಿತ್ರದುರ್ಗ




ಇಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರೋಗವಾಹಕ ಅಶ್ರಿತ ರೋಗಗಳ ನಿಯಂತ್ರಣ ಕಚೇರಿವತಿಯಿಂದ ಆರೋಗ್ಯ ನಿರೀಕ್ಷಣಾಧಿಕಾರಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸಮುದಾಯ ಆರೋಗ್ಯ ಅಧಿಕಾರಿ ಗಳಿಗೆ 2 ದಿನಗಳ ಡೆಂಗಿ ಮತ್ತು ಚಿಕುಂಗುನ್ಯ ಹಾಗೂ ಇತರೆ ಕೀಟಜನ್ಯ ರೋಗಗಳ ಕುರಿತು ತರಬೇತಿ ಕಾರ್ಯಕ್ರಮವನ್ನು ಜಿಲ್ಲಾ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ರೇಣುಪ್ರಸಾದ್ ಜೆ. ಪಿ ಉದ್ಘಾಟಿಸಿ ಮಾತನಾಡಿ ಡೆಂಗಿ ಮತ್ತು ಚಿಕುಂ ಗುನ್ಯಯ ಇತರೆ ಸಾಂಕ್ರಾಮಿಕ ರೋಗಗಳ ಹತೋಟಿ ಮತ್ತು ನಿರ್ಮೂಲನೆ ಮಾಡಲು ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲಿ ಗುಣಮಟ್ಟದ ಲಾರ್ವ ಸಮೀಕ್ಷೆ ಮಾಡುವುದು.ಹಾಗೂ ಹೆಚ್ಚು ಹೆಚ್ಚು ಪರೀಕ್ಷೆ ಮತ್ತು ಸೂಕ್ತ ಚಿಕಿತ್ಸೆ ನೀಡುವುದು ಹಾಗೂ ಸಾರ್ವಜನಿಕರಿಗೆ ಮಂಜಾಗ್ರತ ಕ್ರಮಗಳನ್ನು ಅನುಸರಿಸುವಂತೆ ಆರೋಗ್ಯ ಶಿಕ್ಷಣ ನೀಡಿ ರೋಗವನ್ನು ಹತೋಟಿಗೆ ತರುವತೆ ಕರೆ ನೀಡಿದರು.

ಜಿಲ್ಲಾ ರೋಗಾಕ ಆಶಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಕಾಶಿ. ಎನ್ ಮತ್ತು ಜಿಲ್ಲಾ ಕೀಟಶಾಸ್ತ್ರಜ್ಞರಾದ ಶ್ರೀಮತಿ ನಂದಿನಿ ಕಡಿ ಶ್ರೀ ಕರಿಯಣ್ಣ ಜಿಲ್ಲಾ ತರಬೇತಿ ಕೇಂದ್ರ ಜಿಲ್ಲಾ ತರಬೇತಿಕೇಂದ್ರ ಅರೋಗ್ಯ ಮೇಲ್ವಿಚಾರಕರಾದ

ಟಿ. ಮಲ್ಲಿಕಾರ್ಜುನ್ ಶ್ರೀನಿವಾಸ್ ಬಿ. ಆರ್ ನಾಗರಾಜ್ ಹೆಚ್. ಎ ನಾಗರಾಜ್ ಲೋಕೇಶ್ ಪಾಂಡು ಅರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಕಚೇರಿಯ ಸಿಬ್ಬಂದಿ ಹಾಜರಿದ್ದರು....



ಚಳ್ಳಕೆರೆ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 154ನೇ ಗಾಂಧಿ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಜಯಂತಿ ಕಾರ್ಯಕ್ರಮವನ್ನು ಆಚರಿಸಿದರು. ಪ್ರಾಂಶುಪಾಲ ಎಂ.ರವೀಶ್, ಉಪನ್ಯಾಸಕ ವರ್ಗ ಹಾಜರಿದ್ದರು.

## ನೀಲನಕ್ಷೆ ತಯಾರಿಕಾ ಕೌಶಲ್ಯ, ಡಯಟ್‌ನ ಪರಿಚಯಾತ್ಮಕ ಕಾರ್ಯಾಗಾರ ಉದ್ಘಾಟನೆ



» ಚಿತ್ರದುರ್ಗ

ಪ್ರತಿಯೊಬ್ಬ ಶಿಕ್ಷಕರು ನೀಲನಕ್ಷೆ ತಯಾರಿಕಾ ಕೌಶಲ್ಯ ಒಳಗೊಂಡಾಗ ಮಾತ್ರ ಪ್ರಶ್ನೆ ಪತ್ರಿಕೆ ಸಿದ್ದಪಡಿಸಲು ಸಾಧ್ಯ ಎಂದು ಹೊಳಲ್ಕೆರೆ ಎಂ.ಎಂ.ಪೌಢಶಾಲೆ ಶಿಕ್ಷಕ ಮಾರುತಿ ತಿಳಿಸಿದರು.ರಾಷ್ಟ್ರೀಯ ಹೆದ್ದಾರಿ-13 ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಇಡಿ. ವಿದ್ಯಾರ್ಥಿಗಳಿಗೆ ನೀಲನಕ್ಷೆ ತಯಾರಿಕೆ ಕೌಶಲ್ಯ ಹಾಗೂ ಡಯಟ್‌ನ ಪರಿಚಯಾತ್ಮಕ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.ಶಿಕ್ಷಕರುಗಳು ಪ್ರಶ್ನೆ ಪತ್ರಿಕೆ ತಯಾರಿಕಾ ಕೌಶಲ್ಯವನ್ನು ಹೊಂದಿದಾಗ ಮಾತ್ರ ಉತ್ತಮ ಶಿಕ್ಷಕರಾಗಬಹುದೆಂದು ಎಲ್ಲಾ ಆಯಾಮಗಳನ್ನು ವಿವರಿಸಿದರು.ಡಯಟ್‌ನ ಉಪನ್ಯಾಸಕ ಪ್ರಶಾಂತ್ ಮಾತನಾಡಿ 1986 ರ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಮೇಲೆ ಡಯಟ್ ಆರಂಭಗೊಂಡಿದ್ದು, ಕರ್ನಾಟಕದಲ್ಲಿರುವ 34 ಡಯಟ್‌ಗಳಲ್ಲಿನ ಡಿ.ಡಿ.ಪಿ.ಐ. ಬಿ.ಇ.ಓ. ಗ್ರೇಡ್‌ನವರು ಉಪನ್ಯಾಸಕರು ಎಷ್ಟು ಸಿಬ್ಬಂದಿಯಿದ್ದಾರೆ ಅವರವರ ಕಾರ್ಯವೈಖರಿ ಏನು ಎಂಬುದನ್ನು ಕೂಲಂಕುಷವಾಗಿ ಬಿ.ಇ.ಡಿ.ವಿದ್ಯಾರ್ಥಿಗಳಿಗೆ ಪರಿಚಯಿಸಿದರು.ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಜಯಲಕ್ಷ್ಮಿ, ಉಪ ಪ್ರಾಚಾರ್ಯರಾದ ಶಿವಕುಮಾರ್, ಉಪನ್ಯಾಸಕರುಗಳಾದ ಮಂಜುಶ್ರಿ, ಪಲ್ಲವಿ, ಪದ್ಮಶ್ರಿ, ಅರ್ಚನ ಇವರುಗಳು ವೇದಿಕೆಯಲ್ಲಿದ್ದರು.

## ರಾಜ್ಯೋತ್ಸವ ಪ್ರಶಸ್ತಿಗೆ ನೊಂದಣಿ

**ದಾವಣಗೆರೆ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಪ್ರಸಕ್ತ ಸಾಲಿನ ರಾಜ್ಯೋತ್ಸವ ಪ್ರಶಸ್ತಿಗೆ ವಿವಿಧ ಕ್ಷೇತ್ರಗಳ ಸಾಧಕರ ಹೆಸರುಗಳನ್ನು ಸಾರ್ವಜನಿಕರು ಸೇವಾ ಸಿಂಧು ಪೋರ್ಟಲ್ http://sevasindhu.karnataka.gov.in ನಲ್ಲಿ ನಾಮನಿರ್ದೇಶನ ಮಾಡಬಹುದಾಗಿದೆ.

## ಪ್ರಮುಖ ಸುದ್ದಿ

# 06,07ರಂದು ಬಬ್ಬೂರು ಕೃಷಿ ಫಾರಂ ಶತಮಾನೋತ್ಸವ ಸಂಭ್ರಮಾಚರಣೆ

» ಮೊದಲ ಪುಟದಿಂದ

**ಬಬ್ಬರೂ ಕೃಷಿ ಪಾರಂ ಸ್ಥಾಪನೆ ಇತಿಹಾಸ:** 1899 ರಲ್ಲಿ ಬೆಂಗಳೂರಿನಲ್ಲಿ ಮೈಸೂರು ರಾಜ್ಯದ ಮಹಾರಾಣಿ ಕೆಂಪ ನಂಜಮ್ಮಣ್ಣಿ ವಾಣಿ ವಿಲಾಸ ಅವರು ಬೆಂಗಳೂರಿನ ಹೆಬ್ಬಾಳದಲ್ಲಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪಿಸಲು ಕಾರಣಿಕರ್ತರಾದರು. ನಂತರ 1906 ರಲ್ಲಿ ಹೆಬ್ಬಾಳ ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡ ಡಾ.ಲೆಸ್ಲಿ ಕೋಲ್ಮನ್ ಚಿತ್ರದುರ್ಗ ಜಿಲ್ಲೆಯಲ್ಲಿ ಹತ್ತಿ ಹಾಗೂ ಕಬ್ಬು ಸಂಶೋಧನೆಗಾಗಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದರು. ಡಾ.ಲೆಸ್ಲಿ ಕೋಲ್ಮನ್ ಅವರ ಸತತ ಪ್ರಯತ್ನದ ಫಲವಾಗಿ ಜುಲೈ, 1916ರಲ್ಲಿ ಚಿತ್ರದುರ್ಗ ಹಿರಿಯೂರಿನ ಬಬ್ಬೂರಿನಲ್ಲಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪನೆಯಾಯಿತು.

**ತಳಿಗಳ ಅಭಿವೃದ್ಧಿ :** ಆರಂಭದಲ್ಲಿ ಬಬ್ಬೂರಿನ ಕೃಷಿ ಸಂಶೋಧನಾ ಕೇಂದ್ರದಲ್ಲಿ ಎಸ್-69 ಎನ್ನುವ ಹೊಸ ಹತ್ತಿ ತಳಿಯನ್ನು ಹೊರಂತಂದು ಸುಮಾರು 6000 ಎಕರೆ ಜಮೀನಿಗೆ ಬಿತ್ತನೆ ಬೀಜ ಉತ್ಪಾದಿಸಿ ವಿತರಿಸಲಾಯಿತು. ನಂತರ ಹೆಚ್.ಎಂ.-544 ಹಾಗೂ ಹೆಚ್.ಎಂ.-320 ಕಬ್ಬಿನ ತಳಿಗಳನ್ನು ಸಂಶೋಧನಾ ಕೇಂದ್ರದಿಂದ ಪರಿಚಯಿಸಲಾಯಿತು. 1916ರಲ್ಲಿ ಆರಂಭವಾದ ಬಬ್ಬರೂ ಕೃಷಿ ಸಂಶೋದನಾ ಕೇಂದ್ರ ಇದವರೆಗೂ ಭತ್ತದಲ್ಲಿ 11 ತಳಿ, ಜೋಳ 5, ಮೆಕ್ಕಜೋಳ 2 ಹೈಬ್ರಿಡ್, ರಾಗಿ 5, ನವಣೆ 2, ಊದಲು 1, ಹೆಸರು 2, ಹುರಳಿ 1, ಉದ್ದು 2, ಅಲಸಂದೆ 2, ತೊಗರಿ 1, ಕಡಲೆ 12, ಕಬ್ಬು 6, ಹತ್ತಿ 18, ಮೆಣಸಿಕಾಯಿ 2, ಎಳ್ಳು 1, ಹರಳು 9, ಸೂರ್ಯಕಾಂತಿ 5, ಕುಸಬೆ 2, ಶೇಂಗಾ 7 ಮತ್ತು ಸಾಸಿವೆ 2 ತಳಿಗಳನ್ನು ಅಭಿವೃದ್ಧಿ ಪಡಿಸಿದೆ. ಇದುವರೆಗೂ ಸಂಶೋಧನಾ ಕೇಂದ್ರದಲ್ಲಿ 24 ಬೆಳಗಳಲ್ಲಿ 94 ತಳಿಗಳು, 69 ಬೇಸಾಯ ಕ್ರಮಗಳು, ಕೃಷಿ ತಾಂತ್ರಿಕತೆ ಮತ್ತು ಸಸ್ಯ ಸಂರಕ್ಷಣಾ ತಾಂತ್ರಿಕಗಳನ್ನು ರೈತರಿಗೆ ಶಿಫಾರಸ್ಸು ಮಾಡುವುದರೊಂದಿಗೆ ತರಬೇತಿಯನ್ನು ಸಹ ನೀಡಲಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಅನುಗುಣವಾಗಿ ಸಂಶೋಧನೆಗಳು ಮುಂದುವರೆದಿವೆ. ಮಾವು, ದಾಳಿಂಬೆ, ತೆಂಗು, ಅಡಿಕೆ, ಈರುಳ್ಳಿ, ಸೇವಂತಿ, ಚಂಡು ಹೂವು, ಶೇಂಗಾ, ರಾಗಿ, ಅಣಬೆ ತಳಿಗಳ ಹೊಸ ತಳಿಗಳ ಸಂಶೋಧನೆ ಕಾರ್ಯ ನಡೆಯುತ್ತಿದೆ.

**ರೈತರ ಜೀವನ ಮಟ್ಟ ಸುಧಾರಣೆಗೆ ಬೆನ್ನೆಲುಬು:** ಬಬ್ಬೂರು ಸಂಶೋಧನಾ ಕೇಂದ್ರ ರೈತರ ಜೀವನ ಮಟ್ಟ ಸುಧಾರಿಸಲು, ಬೆಳೆದ ಬೆಳೆಗಳಿಗೆ ಮೌಲ್ಯ ದೊರಕಿಸಿಕೊಡುವ ನಿಟ್ಟಿನಲ್ಲಿ ಸದಾ ಬದ್ದವಾಗಿದೆ. ಇಲ್ಲಿ ರೈತರಿಗೆ ತರಬೇತಿಗಳು ಹಾಗೂ ಪ್ರಾತ್ಯಕ್ಷತೆಗಳನ್ನು ಸಹ ನೀಡಲಾಗುತ್ತಿದೆ. ರೈತರಿಗೆ ಸಮಗ್ರ ಬೇಸಾಯ ಪದ್ದತಿ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡುತ್ತಿದೆ. ಬಬ್ಬರೂ ಫಾರಂ ಕೃಷಿ ತಾಂತ್ರಿಕತೆ ವಿಭಾಗದಿಂದ ರೂಪಿಸಲಾಗಿರುವ ಸೈಕಲ್ ವೀಡರ್, ಕಾಫಿ ರೇಕರ್‌ಗಳು ರೈತರಿಗೆ ಉಪಯುಕ್ತವಾಗಿವೆ. ಇಲ್ಲಿ ರೈತರು ಬೆಳೆ ಶೇಂಗಾ ಬೆಳೆಗಳನ್ನು ಮೌಲ್ಯ ವರ್ಧನೆಯನ್ನು ರೈತರೇ ಹೆಚ್ಚಿಸಿಕೊಳ್ಳು ಎಲ್ಲಾ ರೀತಿಯ ಸವಲತ್ತುಗಳನ್ನು ಒದಗಿಸಲಾಗಿದೆ. ರೈತರು ಶೇಂಗಾ ಚಿಕ್ಕಿ,



ಕೋಲ್ಡ್ ಪ್ರೆಸ್ ಶೇಂಗಾ ಎಣ್ಣೆ ತೆಗೆಯುಲು ಅವಕಾಶ ಮಾಡಿಕೊಡಲಾಗಿದೆ. ರೈತರು ಬೀಜ ಮಾರಾಟ ಮಾಡಲು ಬಯಸಿದರೆ ಈ ಸಂಶೋಧನಾ ಕೇಂದ್ರದಲ್ಲಿಯೇ ಅವುಗಳನ್ನು ಪ್ರಮಾಣೀಕರಿಸಿ ನೀಡಲಾಗುವುದು.

**ನವ ಸಂಶೋಧನೆಗೆ ಮುನ್ನುಡಿ:** ಬಬ್ಬರೂ ಕೃಷಿ ಸಂಶೋಧನಾ ಕೇಂದ್ರ ನವ ಸಂಶೋಧನೆಗೆ ಮುನ್ನಡಿ ಬರೆದಿದ್ದು, ಇಲ್ಲಿ ಅಭಿವೃದ್ಧಿ ಪಡಿಸಲಾದ ಶೇಂಗಾ ತಳಿ ಕೆ-1812 (ಕದರಿ ಲೇಪಾಕ್ಷಿ), ಯಂತ್ರ ಚಾಲಿತ ಕೋಯ್ಲಿಗೆ ಸೂಕ್ತವಾದ ಕಡಲೆ ತಳಿ ಎನ್.ಬಿ.ಇ.ಜಿ-47, ಹಾಗೂ ಬಿಳಿ ರಾಗಿ ತಳಿ, ಕೆ.ಎಂ.ಆರ್ -340 ರೈತರಲ್ಲಿ ಹೊಸ ಭರವಸೆ ಮೂಡಿಸಿವೆ. ಕದರಿ ಲೇಪಾಕ್ಷಿ ತಳಿಯು ಅಧಿಕ ಇಳುವರಿ ನೀಡುವುದರ ಜೊತೆ ಕಾಳುಗಳಲ್ಲಿ ಶೇ.51 ರಷ್ಟು ಎಣ್ಣೆ ಅಂಶವಿದೆ. ಎಲೆ ಚುಕ್ಕೆ, ತುಕ್ಕು, ರಂಗೋಲಿ ಹುಳಿ, ಸ್ಪೋಡೋಪ್ಟೇರಾ ಸೇರಿದಂತೆ ಹಲವು ಕೀಟಗಳ ಬಾಧೆ ತಡೆಯ ಕ್ಷಮತೆ ಹೊಂದಿದೆ. ಹೆಚ್ಚು ಹಸಿರಾಗಿರುವ ಈ ಶೇಂಗಾ ತಳಿಯು ಮೇವನ್ನು ಕೂಡ ಒದಗಿಸಲಿದೆ. ಯಂತ್ರ ಚಾಲಿತ ಕಡಳೆ ತಳಿಯು ರೈತರಿಗೆ ಅನುಕೂಲವಾಗಿದ್ದು, ನೀರಾವರಿ ಬಿತ್ತನೆಗೆ ಸೂಕ್ತವಾಗಿದೆ. ಹೆಚ್ಚು ಮಳೆ, ಸೊರಗು ರೋಗಕ್ಕೂ ಸಹಿಷ್ಣುತೆ ಹೊಂದಿದೆ. ಅಧಿಕ ಇಳುವರಿ ಜೊತೆ ಇದರ ಕಾಳುಗಳು ಅಧಿಕ ಪ್ರೋಟಿನ್ ಹಾಗೂ ನಾರಿನ ಅಂಶವನ್ನು ಹೊಂದಿವೆ. ಇನ್ನೂ ಬಿಳಿ ರಾಗಿ ತಳಿಯು ಬೇಕರಿ ಹಾಗೂ ಮೌಲ್ಯವರ್ಧಿತ ತಿನಿಸುಗಳಗೆ ಉಪಯುಕ್ತವಾಗಿದೆ. ಬೆಳೆಯು ಬೆಂಕಿ ರೋಗ ನಿರೋಧಕ ಶಕ್ತಿಯನ್ನು ಹೊಂದಿದೆ. ಈ ತಳಿಗಳ ಬಗ್ಗೆ ರೈತರು ಹೆಚ್ಚಿನ ಒಲವು ತೋರುತ್ತಿದ್ದಾರೆ ಎಂದರು.

**ವಿವಿಧ ಬೆಳೆಗಳ ತಳಿ ಅಭಿವೃದ್ಧಿ :** ಬಬ್ಬೂರು ಫಾರಂ ಕಳೆದ ನೂರು ವರ್ಷಗಳ ಅವಧಿಯಲ್ಲಿ 24 ಬೆಳೆಗಳಲ್ಲಿ 94 ತಳಿಗಳು ಮತ್ತು ಸಂಕಿರಣ ತಳಿಗಳನ್ನು ಹಾಗೂ 69 ಬೇಸಾಯ ಕ್ರಮಗಳು, ಕೃಷಿ ತಾಂತ್ರಿಕತೆ ಮತ್ತು ಸಸ್ಯ ಸಂರಕ್ಷಣಾ ತಾಂತ್ರಿಕತೆಗಳನ್ನು ರೈತರಿಗೆ ಶಿಫಾರಸು ಮಾಡಲಾಗಿದೆ. ವಿವಿಧ ಬೆಳೆಗಳ ಸುಧಾರಿತ ತಳಿಗಳನ್ನು ಅಭಿವೃದ್ಧಿಪಡಿಸಿ ಬಿಡುಗಡೆ ಮಾಡಿದೆ. ಇದರಲ್ಲಿ ಭತ್ತದಲ್ಲಿ 11 ತಳಿ, ಜೋಳ-05, ಗೋವಿನ ಜೋಳ-02 ಸಂಕರಣ ತಳಿಗಳನ್ನು ಪರಿಚಯಿಸಲಾಗಿದೆ. ಸಿರಿಧಾನ್ಯಗಳಾದ ರಾಗಿಯಲ್ಲಿ 05 ತಳಿ, ನವಣೆ-02, ಊದಲು-01, ದ್ವಿದಳ ಬೆಳೆಗಳಾದ ಹೆಸರು-02, ಹುರುಳಿ-01, ಉದ್ದು-02, ಅಲಸಂದಿ-02, ತೊಗರಿ-01 ಮತ್ತು ಕಡಲೆಯಲ್ಲಿ 12 ತಳಿಗಳನ್ನು ಬಿಡುಗಡೆ ಮಾಡಲಾಗಿದೆ. ವಾಣಿಜ್ಯ ಬೆಳೆಗಳಾದ ಕಬ್ಬು ಬೆಳೆಯಲ್ಲಿ -06 ತಳಿಗಳು, ಹತ್ತಿ-18, ಮೆಣಸಿನಕಾಯಿ-02 ತಳಿಗಳ ಸಂಶೋಧನೆ ಮಾಡಿ, ರೈತರಿಗೆ ಬೆಳೆಯಲು ಶಿಫಾರಸು ಮಾಡಲಾಗಿದೆ. ಎಳ್ಳು-01, ಹರಳು-09, ಸೂರ್ಯಕಾಂತಿ-05, ಕುಸುಬೆ-02, ಶೇಂಗಾ-07, ಸಾಸಿವೆ-02 ತಳಿಗಳನ್ನು ಶಿಫಾರಸು ಮಾಡಲಾಗಿದೆ. ವಿವಿಧ ಬೇಸಾಯ ಕ್ರಮಗಳು ಮತ್ತು ಸಸ್ಯ ಸಂರಕ್ಷಣಾ ತಾಂತ್ರಿಕತೆಗಳನ್ನು ಆಯಾ ಸಂದರ್ಭದಲ್ಲಿ ತಕ್ಕಂತೆ ಕೇಂದ್ರದಿಂದ ಬಿಡುಗಡೆಗೊಳಿಸಲಾಗಿದೆ. ತೋಟಗಾರಿಕೆ ಬೆಳೆಗಳಾದ ತೆಂಗು, ಅಡಿಕೆ, ಈರುಳ್ಳಿ, ಮಾವು ಮತ್ತು ದಾಳಿಂಬೆಗಳಲ್ಲಿ ಸಂಶೋಧನೆ ನಡೆಸಿ, ಉತ್ಕೃಷ್ಟವಾದ ಸಸಿಗಳನ್ನು ಉತ್ಪಾದಿಸಿ ರೈತರಿಗೆ ಮಾರಾಟ ಮಾಡಲಾಗಿದೆ. ಬಬ್ಬೂರು ಫಾರಂ ನಲ್ಲಿ ಕೃಷಿ ತಾಂತ್ರಿಕತೆಯ ವಿಭಾಗದಿಂದ ಬಿಡುಗಡೆ ಮಾಡಿರುವ ಸೈಕಲ್ ವೀಡರ್ ಮತ್ತು ಕಾಫಿ ರೇಕರ್ ತಾಂತ್ರಿಕತೆಗಳು ರೈತರಿಗೆ ಉಪಯುಕ್ತವಾಗಿವೆ ಎಂದರು.

ತೋಟಗಾರಿಕೆ ವಿಶ್ವವಿದ್ಯಾಲಯದೊಂದಿಗೆ ಸಮ್ಮಿಳನ: ಸ್ವಾತಂತ್ರ ಪೂರ್ವದಲ್ಲಿ ಕೃಷಿ ಸಂಶೋಧನಾ ಕೇಂದ್ರವಾಗಿ ಆರಂಭವಾದ ಹಿರಿಯೂರಿನ ಬಬ್ಬೂರು ಕೃಷಿ ಸಂಶೋಧನಾ ಕೇಂದ್ರ, ಸ್ವಾತಂತ್ರ ನಂತರ 1965 ವರೆಗೆ ಕೃಷಿ ಇಲಾಖೆಯ ಬೀಜೋತ್ಪಾದನಾ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿತ್ತು. ನಂತರ ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಆಡಳಿತಕ್ಕೆ ಒಳಪಟ್ಟು ಕೃಷಿ ಸಂಶೋಧನಾ ಕೇಂದ್ರವಾಗಿ ಪರಿವರ್ತಿತವಾಯಿತು. 2008ರಲ್ಲಿ ಬಾಗಲಕೋಟೆ ತೋಟಗಾರಿಕೆ ವಿಜ್ಞಾನ ವಿಶ್ವ ವಿದ್ಯಾಲಯದ ತೋಟಗಾರಿಕೆ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರವಾಗಿ ಕಾರ್ಯನಿರ್ವಹಿಸಿತು. ಪ್ರಸ್ತುತ 2013ರಲ್ಲಿ ಸ್ಥಾಪನೆಯಾದ ಕೆಳದ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಆಡಳಿತಕ್ಕೆ ಒಳಪಟ್ಟಿದೆ. ಇದರೊಂದಿಗೆ ಹಿರಿಯೂರು ನಗರದಲ್ಲಿನ ತೋಟಗಾರಿಕೆ ವಿಶ್ವವಿದ್ಯಾಲಯದ ಕಾಲೇಜಿನೊಂದಿಗೆ ಸಮ್ಮಿಳನಗೊಂಡಿದೆ. ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಇದುವರೆಗೂ 600 ಸ್ನಾತಕೋತ್ತರ ವಿದ್ಯಾರ್ಥಿಗಳು ವ್ಯಾಸಂಗ ಪೂರ್ಣಗೊಳಿಸಿದ್ದಾರೆ. ಸದ್ಯ 369 ವಿದ್ಯಾರ್ಥಿಗಳು ಓದುತ್ತಿದಾರೆ. ಇಲ್ಲಿ ಉನ್ನತ ಮಟ್ಟದ ವಿದ್ಯಾಭ್ಯಾಸ ಲಭಿಸುತ್ತಿದ್ದು, ಹಲವಾರು ವಿದ್ಯಾರ್ಥಿಗಳು ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆಯ ಕಿರಿಯ ಸಂಶೋಧನಾ ಫೆಲೋಶಿಫ್ ಪಡೆದಿದ್ದಾರೆ. ಕೆಲವರು ವಿಜ್ಞಾನಿಗಳಾಗಿದ್ದಾರೆ, ಕೆಲವರು ಸ್ವಂತ ಉದ್ದಿಮೆಗಳನ್ನು ತರೆದು ರಾಜ್ಯಕ್ಕೆ ಕೊಡುಗೆ ನೀಡುತ್ತಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಕೆ.ಮಂಜಪ್ಪ, ಬಬ್ಬೂರು ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಸಹ ಸಂಶೋಧನಾ ಕೇಂದ್ರದ ನಿರ್ದೇಶಕ ಡಾ.ಸುರೇಶ್ ಡಿ. ಏಕಬೋಟೆ, ಹಿರಿಯ ವಿಜ್ಞಾನಿಗಳಾದ ಡಾ.ಓ.ಕುಮಾರ್, ಜಿಲ್ಲಾ ವಾರ್ತಾಧಿಕಾರಿ ತುಕಾರಾಂರಾವ್ ಬಿ.ವಿ, ಡಾ.ಓಂಕಾರಪ್ಪ, ಅವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶೈಕ್ಷಣಿಕ ಶುಲ್ಕ ಮರುಪಾವತಿ: ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಿಗೆ ಭಾರತ ಸರ್ಕಾರದಿಂದ ನಿಯೋಜಿಸಲ್ಪಟ್ಟ ತಂಡದಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳು ಶೈಕ್ಷಣಿಕ ಶುಲ್ಕವನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 12 ಕೊನೆಯ ದಿನ.

ಶೈಕ್ಷಣಿಕ ಶುಲ್ಕ ಮರುಪಾವತಿಗಾಗಿ ಅರ್ಜಿ ಸಲ್ಲಿಸುವ ಅರ್ಹ ಕ್ರೀಡಾಪಟುಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯಿಂದ ಅರ್ಜಿಯನ್ನು ಪಡೆದು ಭರ್ತಿ ಮಾಡಿ ಅರ್ಜಿಯನ್ನು ಇದೇ ಕಚೇರಿಗೆ ಸಲ್ಲಿಸಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವೈದ್ಯ ಜಯಕುಮಾರ್‌ಗೆ ವೈದ್ಯಶ್ರೀ ಪ್ರಶಸ್ತಿ: ಮಾದಿಗ ನೌಕರರ ಸಂಘದ ವತಿಯಿಂದ ಸನ್ಮಾನ



» **ಚಳ್ಳಕೆರೆ**

ಕಳೆದ ಸುಮಾರು 40 ವರ್ಷಗಳಿಂದ ವೈದ್ಯಕೀಯ ಹಾಗೂ ಶಿಕ್ಷಣ ಕ್ಷೇತ್ರದ ಮಹತ್ ಸಾಧನೆಗಾಗಿ ನಗರದ ಜನಪ್ರಿಯ ವೈದ್ಯ ಹಾಗೂ ರೋಟರಿ ಮಾಕಂಸ್ ಶಾಲೆಯ ಆಡಳಿತಾಧಿಕಾರಿಯಾದ ಡಾ.ಕೆ.ಎಂ.ಜಯ ಕುಮಾರ್‌ಗೆ ವೈದ್ಯಶ್ರೀಪ್ರಶಸ್ತಿ ಪಡೆದ ಹಿನ್ನೆಲೆಯಲ್ಲಿ ತಾಲ್ಲೂಕು ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ವತಿಯಿಂದ ಅವರ ಖಾಸಗಿ ಕ್ಲಿನಿಕ್‌ನಲ್ಲಿ ಸನ್ಮಾನಿಸಿ, ಅಭಿನಂದಿಸಲಾಯಿತು. ಸಂಘದ ಅಧ್ಯಕ್ಷ ಡಿ.ದಯಾನಂದ ಮಾತನಾಡಿ, ಚಳ್ಳಕೆರೆ ನಗರದಲ್ಲಿ ಕಳೆದ ಸುಮಾರು 40 ವರ್ಷಗಳಿಂದ ವೈದ್ಯರಾಗಿ ತಮ್ಮ ವೃತ್ತಿಯನ್ನು ಆರಂಭಿಸಿದ ಡಾ.ಕೆ.ಎಂ.ಜಯಕುಮಾರ್ ವಿದ್ಯಾಸಂಸ್ಥೆಗಳ ಸ್ಥಾಪನೆಯ ಜೊತೆಗೆ ರೋಟರಿ ಕ್ಲಬ್ ಮೂಲಕ ಹಲವಾರು ಸಾಮಾಜಿಕ ಹಾಗೂ ಆರೋಗ್ಯ ಶಿಬಿರಗಳನ್ನು ನಡೆಸಿ ಸಾರ್ವಜನಿಕರಿಗೆ ಸಹಕಾರ ನೀಡಿದ್ದಾರೆ. ಅವರ ಸೇವೆಯನ್ನು ಸಮಾಜದ ಎಲ್ಲಾ ವರ್ಗದ ಜನರು ಸ್ವೀಕರಿಸಿ ಸಂತಸ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅವರನ್ನು ನಮ್ಮ ಸಂಘದ ವತಿಯಿಂದ ಸನ್ಮಾನಿಸಲಾಗುತ್ತಿದೆ ಎಂದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಡಾ.ಕೆ.ಎಂ.ಜಯಕುಮಾರ್, ನನ್ನ ತಂದೆಯವರ ಮಾರ್ಗದರ್ಶನದಲ್ಲಿ ನಾನು ವಿವಿಧ ಸಂಘಟನೆಗಳೊಂದಿಗೆ ಕಾರ್ಯನಿರ್ವಹಿಸಿದ್ದೆ. ವೀರಶೈವ ಸೇವಾ ಸಮಾಜವೂ ಸೇರಿದಂತೆ ಹಲವಾರು ಪ್ರಮುಖ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸಿದ್ದೇನೆ. ನನಗೆ ಎಲ್ಲರೂ ಉತ್ತಮವಾಗಿ ಸಹಕಾರ ನೀಡಿದ್ದಾರೆ. ನಮ್ಮ ಸೇವೆಯನ್ನು ಗುರುತಿಸಿದ ಎಲ್ಲರಿಗೂ ಧನ್ಯವಾದ ಅರ್ಪಿಸುವುದಾಗಿ ತಿಳಿಸಿದರು. ಸಂಘದ ಪದಾಧಿಕಾರಿಗಳಾದ ಟಿ.ದುರುಗಪ್ಪ, ಎಚ್. ಹನುಮಂತಪ್ಪ, ವೀರಭದ್ರಪ್ಪ, ಎಸ್.ಬಿ.ತಿಪ್ಪೇಸ್ವಾಮಿ, ಉಪಸ್ಥಿತರಿದ್ದರು.

### ಡೆಂಗ್ಯೂ, ಚಿಕನ್‌ಗುನ್ಯಾ ರೋಗ ನಿಯಂತ್ರಣಕ್ಕಾಗಿ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ಅನುಸರಿಸಲು ಸಲಹೆ

» **ದಾವಣಗೆರೆ**

ಕೀಟಜನ್ಯ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕಾಗಿ ಸಾರ್ವಜನಿಕ ಜಾಗೃತಿ ಅಗತ್ಯವಾದುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್ ಷಣ್ಮುಖಪ್ಪ ತಿಳಿಸಿದ್ದಾರೆ. ಕೀಟಜನ್ಯ ರೋಗಗಳ ನಿಯಂತ್ರಣಕ್ಕಾಗಿ ಸಮುದಾಯದಲ್ಲಿ ಜಾಗೃತಿ ಮೂಡಿಸಲು ಮತ್ತು ಸಾರ್ವಜನಿಕರ ಆರೋಗ್ಯ ಕಾಪಾಡುವ ದೃಷ್ಟಿಯಿಂದ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಮನೆ-ಮನೆ ಭೇಟಿ ನೀಡಿ ಜ್ವರ ಸಮೀಕ್ಷೆ ಮತ್ತು ಲಾರ್ವಾ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಹೆಚ್ಚಿನ ಜ್ವರ ಪ್ರಕರಣಗಳು ಕಂಡುಬಂದಲ್ಲಿ ರಕ್ತದ ಮಾದರಿ, ರಕ್ತಲೇಪನ ಸಂಗ್ರಹಿಸಿ ಪರೀಕ್ಷೆಗೊಳಪಡಿಸಲಾಗುತ್ತದೆ. ವಿಶೇಷವಾಗಿ ವಲಸಿಗರ ಕಾವಲು ಸಮೀಕ್ಷೆಯನ್ನು ನಡೆಸಲಾಗುತ್ತಿದ್ದು, ಈ ವರ್ಷ ವಲಸಿಗರಲ್ಲಿ 9 ಮಲೇರಿಯಾ ಪ್ರಕರಣಗಳು ಕಂಡುಬಂದಿವೆ. ಈಡೀಸ್ ಲಾರ್ವಾ ಪ್ರಾತ್ಯಕ್ಷಿಕೆಯೊಂದಿಗೆ ಆರೋಗ್ಯ ಶಿಕ್ಷಣ ನೀಡಿ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದ್ದು. ಡೆಂಗ್ಯೂ ನಿಯಂತ್ರಣ ಕ್ರಮಗಳ ಅನುಷ್ಠಾನದಲ್ಲಿ ಸಮುದಾಯದ ಸಹಕಾರ ಅತ್ಯಗತ್ಯ. ಮಳೆಗಾಲದಲ್ಲಿ ಡೆಂಗ್ಯು ಪ್ರಕರಣಗಳು ಹೆಚ್ಚು ಕಂಡುಬರುತ್ತವೆ.

# ಡಿಸಿಸಿ ಬ್ಯಾಂಕಿಗೆ ರಾಷ್ಟ್ರಮಟ್ಟದಲ್ಲಿ 2ನೇ ಬಹುಮಾನ






» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್, ರಾಷ್ಟ್ರದ 02 ನೇ ಅತ್ಯುತ್ತಮ ಡಿ.ಸಿ.ಸಿ. ಬ್ಯಾಂಕ್ ಪ್ರಶಸ್ತಿಯನ್ನು ಪಡೆದುಕೊಂಡಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಚಿತ್ರದುರ್ಗ ಡಿ.ಸಿ.ಸಿ. ಬ್ಯಾಂಕ್ ಅಧ್ಯಕ್ಷರೂ ಆಗಿರುವ ಡಿ. ಸುಧಾಕರ್ ಅವರು ಹೇಳಿದರು.

ಚಿತ್ರದುರ್ಗದ ಡಿ.ಸಿ.ಸಿ. ಬ್ಯಾಂಕ್‌ನ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ ಸುದ್ದಿಗೋಷ್ಠಿಯಲ್ಲಿ ಈ ಕುರಿತು ವಿವರ ನೀಡಿದ ಸಚಿವರು, ರಾಷ್ಟ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ 351 ಡಿ.ಸಿ.ಸಿ. ಬ್ಯಾಂಕುಗಳ ಪೈಕಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ 02 ನೇ ಅತ್ಯುತ್ತಮ ಬ್ಯಾಂಕ್ ಪ್ರಶಸ್ತಿಯನ್ನು ಚಿತ್ರದುರ್ಗದ ಡಿ.ಸಿ.ಸಿ. ಬ್ಯಾಂಕ್ ಪಡೆದುಕೊಂಡಿದೆ. ನ್ಯಾಷನಲ್ ಫೆಡರೇಷನ್ ಆಫ್ ಸ್ಟೇಟ್ ಕೋ-ಆಪರೇಟಿವ್ ಬ್ಯಾಂಕ್ ಲಿ. (ಎನ್.ಎ.ಎಫ್.ಎಸ್.ಸಿ.ಒ.ಬಿ) ಮುಂಬೈ ಅವರ ವತಿಯಿಂದ ರಾಷ್ಟ್ರ ಮಟ್ಟದಲ್ಲಿ ಕೊಡಮಾಡುವ ಅತ್ಯುತ್ತಮ ಡಿ.ಸಿ.ಸಿ ಬ್ಯಾಂಕ್ ಪ್ರಶಸ್ತಿಯನ್ನು ಪಡೆದುಕೊಂಡಿದೆ. ಮೊದಲ ಸ್ಥಾನವನ್ನು ತೆಲಂಗಾಣದ ಕರೀಂನಗರ ಡಿಸಿಸಿ ಬ್ಯಾಂಕ್ ಹಾಗೂ ಮೂರನೆ ಸ್ಥಾನವನ್ನು ರಾಜಸ್ಥಾನದ ಜೈಪುರ ಡಿಸಿಸಿ ಬ್ಯಾಂಕ್ ಪಡೆದುಕೊಂಡಿದೆ. ಇದು 2021-22 ನೇ ಸಾಲಿನ ಪ್ರಶಸ್ತಿಯಾಗಿದೆ. ಕಳೆದ ಸೆ. 26 ರಂದು ರಾಜಸ್ಥಾನ ರಾಜ್ಯದ ಜೈಪುರದಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಮತ್ತು ಪಾರಿತೋಷಕ ನೀಡಿ ಸನ್ಮಾನಿಸಲಾಗಿದೆ. ಬ್ಯಾಂಕಿನ ಉಪಾಧ್ಯಕ್ಷ ಹೆಚ್.ಬಿ.ಮಂಜುನಾಥ್ ಮತ್ತು ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್‌ಉಲ್ಲಾ ಷರೀಫ್ ಪ್ರಶಸ್ತಿ ಮತ್ತು ಪಾರಿತೋಷಕವನ್ನು ಸ್ವೀಕರಿಸಿದರು. ಈ ಸಂಧರ್ಭದಲ್ಲಿ ರಾಜಸ್ಥಾನ ರಾಜ್ಯದ ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೇಯಾ, ಓಂಈಖಅಔಃ ನ ಅಧ್ಯಕ್ಷ ಕೊಂಡೂರು ರವೀಂದ್ರ ರಾವ್, ಉಪಾಧ್ಯಕ್ಷ ಉಲ್ಲಾಸ್ ದೇಸಾಯಿ, ಸಿಇಒ ಭೀಮಾ ಸುಬ್ರಮಣ್ಯಂ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನ ಅಧ್ಯಕ್ಷ ಬೆಳ್ಳಿ ಪ್ರಕಾಶ್ ಮತ್ತು ಸಿಇಒ ಸಿ.ಎನ್. ದೇವರಾಜ್ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.


ಚಿತ್ರದುರ್ಗ ಡಿ.ಸಿ.ಸಿ. ಬ್ಯಾಂಕ್ ಸಾಧನೆ ಕುರಿತು ಮಾಹಿತಿ ನೀಡಿದ ಸಚಿವರು, ಕಳೆದ 67 ವರ್ಷಗಳಿಂದ ರೈತಬಾಂಧವರ ಅವಶ್ಯಕತೆಗೆ ಅನುಗುಣವಾಗಿ ಬೆಳೆ ಸಾಲ, ಭೂ ಅಭಿವೃದ್ಧಿ ಸಾಲ ನೀಡುತ್ತಾ ಬಂದಿದ್ದು, ಸಾಲ ಹಂಚಿಕೆ, ವಸೂಲಾತಿ ಮತ್ತು ಠೇವಣಿ ಸಂಗ್ರಹಣೆ, ಸ್ವಸಹಾಯ ಗುಂಪುಗಳ ರಚನೆ ಹಾಗೂ ಸಾಲ ಜೋಡಣೆ ಮುಂತಾದ ಎಲ್ಲಾ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಸಾಧಿಸುತ್ತಾ ಬಂದಿದೆ. ಬ್ಯಾಂಕ್ ರೈತ ಸ್ನೇಹಿ ಮತ್ತು ಗ್ರಾಮೀಣಾಭಿವೃದ್ಧಿ ಸ್ನೇಹಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರಲಾಗಿದ್ದು ಬ್ಯಾಂಕ್ ಪ್ರತಿ ವರ್ಷ ಎಲ್ಲಾ ವ್ಯವಹಾರಗಳಲ್ಲಿ ಅಂದರೆ ಠೇವಣಿ ಸಂಗ್ರಹಣೆ, ಸಾಲ ವಿತರಣೆ, ಷೇರು ಸಂಗ್ರಹಣೆ, ಹೂಡಿಕೆಗಳು, ಸಾಲ ವಸೂಲಾತಿ, ಹೊಸ ರೈತರಿಗೆ ಸಾಲ ವಿತರಣೆಯಲ್ಲಿ ಹೆಚ್ಚು ಪ್ರಗತಿ ಸಾಧಿಸಿರುವುದನ್ನು ಆಧರಿಸಿ ಚಿತ್ರದುರ್ಗದ ಬ್ಯಾಂಕ್‌ಗೆ ಪ್ರಶಸ್ತಿ ಸಂದಿದೆ.

ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕ ಇಲ್ಯಾಸ್ ಉಲ್ಲಾ ಷರೀಫ್ ಅವರು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತಭಾಂದವರಿಗೆ ಬೆಳೆ ಸಾಲ ಮತ್ತು ವ್ಯವಸಾಯ ಅಭಿವೃದ್ದಿಗೆ ಮಧ್ಯಮಾವಧಿ ಸಾಲ ಹಾಗೂ ವ್ಯವಸಾಯೇತರ ಸಾಲಗಳಾದ ಗೃಹ ನಿರ್ಮಾಣ/ಖರೀದಿ ಸಾಲ, ಚಿನ್ನಾಭರಣ ಸಾಲ, ವಾಹನ ಸಾಲ, ಮೀರಳತೆ ಸಾಲ, ನೌಕರ ವರ್ಗಕ್ಕೆ ಸಂಬಳಾಧಾರಿತ ಸಾಲ, ಸ್ಥಿರಾಸ್ತಿ ಆಧಾರದ ಮೇಲೆ ಸಾಲ, ಸ್ವಸಹಾಯ ಸಂಘಗಳಿಗೆ (ಎಸ್.ಹೆಚ್.ಜಿ) ಸಾಲ ನೀಡುವ ಮೂಲಕ ಎಲ್ಲಾ ವರ್ಗದ ಸಹಕಾರಿ ಬಂಧುಗಳ ಸರ್ವತೋಮುಖ ಅಭಿವೃದ್ಧಿಗೆ ಆರ್ಥಿಕ ನೆರವು ಕಲ್ಪಿಸಿದೆ. ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಚಿತ್ರದುರ್ಗ ಜಿಲ್ಲಾ ಮಟ್ಟದ ಬ್ಯಾಂಕಾಗಿದ್ದು, 14 ಶಾಖೆಗಳನ್ನು ಹೊಂದಿದ್ದು, ಚಿತ್ರದುರ್ಗದಲ್ಲಿ ಕೇಂದ್ರ ಕಛೇರಿ ಹೊಂದಿರುತ್ತದೆ. ಕಳೆದ 67 ವರ್ಷಗಳಿಂದ ರೈತಬಾಂಧವರ ಅವಶ್ಯಕತೆಗೆ ಅನುಗುಣವಾಗಿ ಬೆಳೆ ಸಾಲ, ಭೂ ಅಭಿವೃದ್ಧಿ ಸಾಲ ನೀಡುತ್ತಾ ಬಂದಿದ್ದು, ಸಾಲ ಹಂಚಿಕೆ, ವಸೂಲಾತಿ ಮತ್ತು ಠೇವಣಿ ಸಂಗ್ರಹಣೆ, ಸ್ವಸಹಾಯ ಗುಂಪುಗಳ ರಚನೆ ಹಾಗೂ ಸಾಲ ಜೋಡಣೆ ಮುಂತಾದ ಎಲ್ಲಾ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಸಾಧಿಸುತ್ತಾ ಬಂದಿದೆ. ಕಳೆದ ಮಾರ್ಚ್ ಅಂತ್ಯದವರೆಗೆ ಬ್ಯಾಂಕಿನಲ್ಲಿ 415 ಸಹಕಾರ ಸಂಘಗಳು ಸದಸ್ಯತ್ವನ್ನು ಪಡೆದಿರುತ್ತಾರೆ. ಡಿ.ಸುಧಾಕರ್‌ರವರು 2004 ರಿಂದ ಬ್ಯಾಂಕಿನ ನಿರ್ದೇಶಕರಾಗಿ ಮತ್ತು 3 ಬಾರಿ ಬ್ಯಾಂಕಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದು, ಇವರ ನಾಯಕತ್ವ ಮತ್ತು ಅಧ್ಯಕ್ಷತೆಯ ಮಾರ್ಗದರ್ಶನದಲ್ಲಿ ಮತ್ತು ಉಪಾಧ್ಯಕ್ಷರು ಹಾಗೂ ನಿರ್ದೇಶಕರು ಹಾಗೂ ಶಾಸಕರಾದ ಟಿ.ರಘುಮೂರ್ತಿ ಹಾಗೂ ಆಡಳಿತ ಮಂಡಳಿಯ ಎಲ್ಲಾ ಸದಸ್ಯರ ಬೆಂಬಲ ಮತ್ತು ಸಹಕಾರದೊಂದಿಗೆ ಬ್ಯಾಂಕ್ ರೈತ ಸ್ನೇಹಿ ಮತ್ತು ಗ್ರಾಮೀಣಾಭಿವೃದ್ಧಿ ಸ್ನೇಹಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರಲಾಗಿದ್ದು ಬ್ಯಾಂಕ್ ಪ್ರತಿ ವರ್ಷ ಎಲ್ಲಾ ವ್ಯವಹಾರಗಳಲ್ಲಿಅಂದರೆಠೇವಣಿಸಂಗ್ರಹಣೆ, ಸಾಲ ವಿತರಣೆ, ಷೇರು ಸಂಗ್ರಹಣೆ, ಹೂಡಿಕೆಗಳು, ಸಾಲ ವಸೂಲಾತಿ, ಹೊಸ ರೈತರಿಗೆ ಸಾಲ ವಿತರಣೆಯಲ್ಲಿ ಹೆಚ್ಚು ಪ್ರಗತಿ ಸಾಧಿಸಿದೆ. ಠೇವಣಿ ರೂ.509.19 ಕೋಟಿ ಸಂಗ್ರಹಣೆಯಾಗಿರುತ್ತದೆ. 2023-24ನೇ ಸಾಲಿಗೆ ಜಿಲ್ಲೆಯ 66000 ರೈತರಿಗೆ ರೂ.500 ಕೋಟಿ ಅಲ್ಪಾವಧಿ ಕೃಷಿ ಬೆಳೆ ಸಾಲ ವಿತರಿಸಲು ಹಾಗೂ 1140 ರೈತರಿಗೆ ರೂ.74.50 ಕೋಟಿ ಮಧ್ಯಮಾವಧಿ ಕೃಷಿ ಸಾಲ ವಿತರಿಸಲು ಗುರಿ ಹಾಕಿಕೊಳ್ಳಲಾಗಿದೆ. 2022-23 ನೇ ಸಾಲಿನಲ್ಲಿ 500 ಸ್ವಸಹಾಯ ಸಂಘಗಳಿಗೆ ರೂ.10 ಕೋಟಿ ಸಾಲ ವಿತರಿಸಲು ಗುರಿ ಹಾಕಿಕೊಳ್ಳಲಾಗಿದೆ. ಜಿಲ್ಲೆಯ 8 ಗ್ರಾಮಗಳಲ್ಲಿ 8 ಹೊಸ ಶಾಖೆಗಳನ್ನು ತೆರಯಲು ಆರ್.ಬಿ.ಐ ನಿಂದ ಅನುಮತಿ ಪಡೆಯಲಾಗಿದೆ. ರಾಮಗಿರಿ, ಹೊರಕೆದೇವಪುರ, ಮಾಡದಕೆರೆ, ಹೊಸದುರ್ಗ ರೋಡ್, ದರ್ಮಪುರ, ಐಮಂಗಲ, ತಳಕು ಮತ್ತು ಸಾಸಲಹಳ್ಳಿಗಳಲ್ಲಿ ಬ್ಯಾಂಕಿನ ಹೊಸ ಶಾಖೆಗಳನ್ನು ತೆರೆಯಲು ಕ್ರಮ ಕೈಗೊಂಡಿರುತ್ತದೆ. 2022-23ನೇ ಸಾಲಿಗೆ ಬ್ಯಾಂಕ್ ರೂ.7.28 ಕೋಟಿ ನಿವ್ವಳ ಲಾಭಗಳಿಸಿರುತ್ತದೆ ಎಂದರು.

ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷರು ಹಾಗೂ ಶಾಸಕರಾದ ರಘುಮೂರ್ತಿ, ನಿರ್ದೇಶಕರಾದ ಟಿ. ಮಹಾಂತೇಶ್, ಎಸ್.ಆರ್. ಗಿರೀಶ್, ನಿಶಾನಿ ಜಯಣ್ಣ, ಉಪಸ್ಥಿತರಿದ್ದರು.

### ಜಿಲ್ಲೆಯ ಎಲ್ಲಾ 11 ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಆಯೋಜನೆ, ಜನರ ಆರೋಗ್ಯ ತಪಾಸಣೆ

# ಆಯುಷ್ಮಾನ್ ಭವ ವಿಶೇಷ ಆರೋಗ್ಯ ಮೇಳ



» **ಚಿತ್ರದುರ್ಗ**

ಆಯುಷ್ಮಾನ್ ಭವ ಕಾರ್ಯಕ್ರಮದ ಅಡಿಯಲ್ಲಿ ಜಿಲ್ಲೆಯ ಎಲ್ಲಾ 11 ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಅಸಾಂಕ್ರಾಮಿಕ ರೋಗಗಳ ಬಗ್ಗೆ (ಹೃದ್ರೋಗ, ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್) ಮತ್ತು ಆರೋಗ್ಯ ಕ್ಷೇಮ ಸೇವೆಗಳ ಬಗ್ಗೆ ವಿಶೇಷ ಆರೋಗ್ಯ ಮೇಳದಲ್ಲಿ ಮಂಗಳವಾರ ಜನರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು.

ಸಮುದಾಯ ಆರೋಗ್ಯ ಕೇಂದ್ರಗಳಾದ ಭರಮಸಾಗರ, ಸಿರಿಗೆರೆ, ಬಿ. ದುರ್ಗ, ಬೆಲಗೂರು, ಕಿಟ್ಟದಾಳ್ ಕಂಚಿಪುರ, ಶ್ರೀರಾಂಪುರ, ಧರ್ಮಪುರ, ಮರಡಿಹಳ್ಳಿ, ನಾಯಕನಹಟ್ಟಿ, ಪರಶುರಾಂಪುರ ಮತ್ತು ರಾಂಪುರಗಳಲ್ಲಿ ವಿಶೇಷ ಆರೋಗ್ಯ ತಪಾಸಣಾ ಮೇಳ ನಡೆಯಿತು.

ವಿಶೇಷ ಆರೋಗ್ಯ ತಪಾಸಣಾ ಮೇಳದ ಜೊತೆಗೆ ಹೆಚ್ಚುವರಿಯಾಗಿ ಸಮುದಾಯ ಆರೋಗ್ಯ ಕೇಂದ್ರ ಭರಮಸಾಗರದಲ್ಲಿ ಶಸ್ತ್ರಚಿಕಿತ್ಸೆ ಮತ್ತು ಮಾನಸಿಕ ಆರೋಗ್ಯಕ್ಕೆ ಸಂಬಂಧಪಟ್ಟ ಶಿಬಿರ ಮತ್ತು ಸಮುದಾಯ ಆರೋಗ್ಯ ಕೇಂದ್ರ ಮರಡಿಹಳ್ಳಿಯಲ್ಲಿ ರಕ್ತದಾನ ಶಿಬಿರ ಮತ್ತು ಕಿವಿ, ಮೂಗು, ಗಂಟಲು ತಜ್ಞರಿಂದ ತಪಾಸಣೆ ಮಾಡಲಾಯಿತು. ಚಿತ್ರದುರ್ಗ ತಾಲ್ಲೂಕಿನ ದೊಡ್ಡಸಿದ್ದವ್ವನಹಳ್ಳಿ ಗ್ರಾಮದ ಗ್ರಾಮ ಪಂಚಾಯಿತಿ ಆವರಣದಲ್ಲಿ ಆಯುಷ್ಮಾನ್ ಭವ ಯೋಜನೆ ಅಡಿ ಉಚಿತ ಆರೋಗ್ಯ ತಪಾಸಣೆ, ಜನಜಾಗೃತಿ ಶಿಬಿರ ಹಮ್ಮಿಕೊಳ್ಳಲಾಯಿತು. ಈ ವೇಳ ಮಾತನಾಡಿದ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿ ಮಠ್, ಯೋಗಾಭ್ಯಾಸ ಗುಣಮಟ್ಟದ ಜೀವನದೊಂದಿಗೆ ಆರೋಗ್ಯ ಮತ್ತು ಕ್ಷೇಮ ಸೇವೆಗಳು ನಿಮ್ಮ ಮನೆ ಬಾಗಿಲಿಗೆ ದೊರೆಯಲಿದೆ ಎಂದು ತಿಳಿಸಿದರು. ಬಿ.ಎಸ್ಸಿ ನರ್ಸಿಂಗ್ ವಿದ್ಯಾರ್ಥಿಗಳಿಂದ ಗರ್ಭಿಣಿ, ಬಾಣಂತಿ ಆರೈಕೆ, ಮಕ್ಕಳ ಲಾಲನೆ ಪಾಲನೆ ಕುರಿತು ಬೀದಿ ನಾಟಕ ಪ್ರದರ್ಶನದ ಮೂಲಕ ಜನಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್, ದೊಡ್ಡಸಿದ್ದವ್ವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಶಮ್ಮೈಲ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀಧರ್, ಭಾಗೇಶ್, ಮಾರುತಿ, ಸಮುದಾಯ ಆರೋಗ್ಯ ಅಧಿಕಾರಿಗಳಾದ ರಮೇಶ್, ಸುಮಲತಾ, ಮೈತ್ರ ಬಿರಾದಾರ್, ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಕಾತ್ಯಾಯನಮ್ಮ, ಅನಿತಾ, ಲಕ್ಷ್ಮೀ, ರೇಖಾ, ರತ್ನಮ್ಮ ಆಶಾ ಕಾರ್ಯಕರ್ತೆಯರಾದ ಸರೋಜಮ್ಮ, ಅರುಣ, ಮಾಣಿಕ್ಯಮ್ಮ ಇದ್ದರು.

### ಗಾಂಧಿ, ಶಾಸ್ತ್ರಿ ಆದರ್ಶಗಳೇ ಕಾಂಗ್ರೆಸ್ ಜೀವಾಳ: ರಘುಮೂರ್ತಿ



» **ಚಳ್ಳಕೆರೆ**

ಪರಮಪೂಜ್ಯ ಮಹಾತ್ಮಗಾಂಧೀಜಿ ಸಂಯಮ, ಅಸಧಾರಣಾ ವ್ಯಕ್ತಿತ್ವ ಹೊಂದಿದ್ದ ಲಾಲ್ ಬಹದ್ದೂರ್ ಶಾಸ್ತ್ರಿಯವರ ಆದರ್ಶಗಳೇ ಕಾಂಗ್ರೆಸ್ ಪಕ್ಷಕ್ಕೆ ಜೀವಾಳ. ಇಂದಿಗೂ ಸಹ ಕಾಂಗ್ರೆಸ್ ಪಕ್ಷ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಮುನ್ನಡೆಯುತ್ತಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ನಗರದ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಮಹಾತ್ಮಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಕೇವಲ ದೇಶದಲ್ಲಿಯಷ್ಟೇ ಇಲ್ಲ ವಿದೇಶದಲ್ಲೂ ಸಹ ತಮ್ಮದೇಯಾದ ಕಾರ್ಯದಕ್ಷತೆಯಿಂದ ಖ್ಯಾತಿಯಾದವರು ಇಬ್ಬರೂ ಮಹಾನ್ ನಾಯಕರು. ಕಾಂಗ್ರೆಸ್ ಇಂತಹ ಮಹಾನ್ ನಾಯಕರ ಮಾರ್ಗದರ್ಶನದಿಂದಲೇ ತನ್ನ ಕಾರ್ಯಚಟುವಟಿಕೆಗಳನ್ನು ಮುಂದುವರೆಸಿದೆ. ಪಕ್ಷ ಎಲ್ಲಾ ಹಂತದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಗಾಂಧೀಜಿ ಮತ್ತು ಶಾಸ್ತ್ರಿಯವರು ಹಾಕಿಕೊಟ್ಟ ಹೆಜ್ಜೆಯಲ್ಲೇ ಮುನ್ನಡೆಯೋಣವೆಂದರು. ಖ್ಯಾತ ಸಾಹಿತಿ, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಬಿ.ತಿಪ್ಪಣ್ಣ ಮರಿಕುಂಟೆ ಮಾತನಾಡಿ, ಗಾಂಧೀಜಿ ಮತ್ತು ನೆಹರೂರವರ ಹೆಸರು ಹೇಳುವುದಲ್ಲಿಯೇ ಸಂತಸವಿದೆ. ಕಾರಣ, ಇವರು ಹೆಸರು ಹೇಳಿದ ಕೂಡಲೇ ಇವರು ದೇಶಕ್ಕೆ ನೀಡಿದ ಅತ್ಯಮೂಲ್ಯ ಕೊಡುಗೆಗಳ ಬಗ್ಗೆ ಚಿಂತನೆ ಆರಂಭವಾಗಲಿದೆ. ಅತ್ಯಂತ ಕಷ್ಟದ ದಿನಗಳಲ್ಲೂ ಸಹ ದೇಶದ ಹಿತಕ್ಕಾಗಿ ಶ್ರಮಿಸಿದಂತಹ ಧೀಮಂತ ನಾಯಕರು ಇವರು.

### ಸಹಕಾರ ಸಂಘ, ಸಂಘ-ಸಂಸ್ಥೆಗಳು ಉಪ ನಿಬಂಧಕರ ಕಚೇರಿಗೆ ವರದಿ

**ದಾವಣಗೆರೆ:** ಜಿಲ್ಲೆಯಲ್ಲಿ ನೋಂದಣಿಯಾಗಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳು ಹಾಗೂ ಸಂಘ ಸಂಸ್ಥೆಗಳಲ್ಲಿ 10 ಮತ್ತು 10 ಕ್ಕಿಂತ ಹೆಚ್ಚು ಮಹಿಳೆಯರು ಕೆಲಸ ಮಾಡುತ್ತಿದ್ದಲ್ಲಿ ಆ ಸಂಘ ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ಕಡ್ಡಾಯವಾಗಿ ರಚನೆ ಮಾಡಬೇಕಾಗಿರುತ್ತದೆ. ಆ ಸಮಿತಿಯಲ್ಲಿ ಒಬ್ಬರು ಅಧ್ಯಕ್ಷರು, ಮೂವರು ಸದಸ್ಯರು ಇದ್ದು ಅದರಲ್ಲಿ ಒಬ್ಬ ಸದಸ್ಯರು ಕಾನೂನಿನ ಪರಿಣಿತರಾಗಿರಬೇಕು. ಎಲ್ಲಾ ಸಂಘ ಸಂಸ್ಥೆಗಳು ಅಂತರಿಕ ದೂರು ಸಮಿತಿಯನ್ನು ರಚಿಸಿ, ಸಮಿತಿ ಆದೇಶದ ಪ್ರತಿಯೊಂದಿಗೆ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ವರದಿ ಮಾಡಲು ಜಿಲ್ಲಾ ಸಂಘಗಳ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕಿ ಹೆಚ್. ಅನ್ನಪೂರ್ಣ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಶಾಸಕರಿಂದ ತಾಲ್ಲೂಕು ಮಟ್ಟದ ಜನತಾದರ್ಶನ

» **ಮೊದಲ ಪುಟದಿಂದ**




ಸಕಾಲದಲ್ಲಿ ಜನರಿಗೆ ಸೇವೆಗಳನ್ನು ನೀಡಿ ಸರ್ಕಾರದ ಯೋಜನೆಗಳನ್ನು ತಲುಪಿಸಲಾಗುವುದು. ಜನರು ಈ ಜನತಾ ದರ್ಶನ ಕಾರ್ಯಕ್ರಮ ಉಪಯೋಗಿಸಿಕೊಂಡು ಮನವಿ ಸಲ್ಲಿಸಬೇಕು. ಹೀಗೆ ಸ್ವೀಕರಿಸಿದ ಅರ್ಜಿಗಳನ್ನು ಐಪಿಜಿಆರ್‌ಎಸ್ ತಂತ್ರಾಂಶದಲ್ಲಿ ಅಳವಡಿಸಿ, ಸಂಬಂಧಪಟ್ಟ ಇಲಾಖೆಗೆ ಕಳುಹಿಸಿಕೊಡಲಾಗುವುದು. ಅರ್ಜಿಗಳು ವಿಲೇವಾರಿ ಆಗುವವರೆಗೂ ತಂತ್ರಾಂಶದ ಮೂಲಕ ಮೇಲ್ವಿಚಾರಣೆ ಮಾಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ವಿದ್ಯಾವಿಕಾಸ ಯೋಜನೆಯಡಿ ತಾಲೂಕಿನ 25,472 ಮಕ್ಕಳಿಗೆ ಎರಡನೇ ಹಂತದ ಶಾಲಾ ಸಮವಸ್ತ್ರ ವಿತರಣೆ ಕಾರ್ಯಕ್ಕೆ ಸಾಂಕೇತಿಕವಾಗಿ ಮಕ್ಕಳಿಗೆ ಸಮವಸ್ತ್ರ ವಿತರಿಸುವ ಮೂಲಕ ಚಾಲನೆ ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಗೃಹಲಕ್ಷ್ಮೀ, ಸುಕನ್ಯಾ ಸಮೃದ್ಧಿ ಯೋಜನೆಗಳ ಫಲಾನುಭವಿಗಳಿಗೆ ಮಂಜೂರಾತಿ ಆದೇಶ ಪತ್ರ ನೀಡಿದರು.

ಕಂದಾಯ ಇಲಾಖೆ ಇಂದಿರಾ ಗಾಂಧಿ ವೃದ್ಧಾಪ್ಯ ಯೋಜನೆಗಳ ಫಲಾನುಭವಿಗಳ ಅರ್ಜಿಯನ್ನು ಸ್ಥಳದಲ್ಲಿಯೇ ಸ್ವೀಕರಿಸಿ, ಮಂಜೂರಾತಿ ಪತ್ರದ ಆದೇಶ ಪ್ರತಿಗಳನ್ನು ಇದೇ ಸಂದರ್ಭದಲ್ಲಿ ವಿತರಣೆ ಮಾಡಲಾಯಿತು. ಅಂಗವಿಕಲರ ವೇತನ ಭತ್ಯೆಗೆ ಅರ್ಜಿ ಸಲ್ಲಿಸಿ ಆಯ್ಕೆಯಾದ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ವಿತರಣೆ ಮಾಡಲಾಯಿತು. 94 ಸಿ ಅಡಿ ಸರ್ಕಾರಿ ಜಮೀನಿನಲ್ಲಿ ನಿರ್ಮಿಸಿಕೊಂಡ ಮನೆಗಳನ್ನು ಸಕ್ರಮಗೊಳಿಸಿದ ಹಕ್ಕು ಪತ್ರಗಳನ್ನು ಫಲಾನುಭವಿಗೆ ನೀಡಲಾಯಿತು. ಇದರಿಂದ ಫಲಾನುವಿಗಳಿಗೆ ಮನೆಯ ಒಡೆತನದ ಹಕ್ಕು ಲಭಿಸಿ ಅದನ್ನು ಪರಭಾರೆ ಹಾಗೂ ಬ್ಯಾಂಕಿನಲ್ಲಿ ಸಾಲ ಪಡೆದು ಅಭಿವೃದ್ಧಿ ಪಡಿಸಲು ಅವಕಾಶ ಲಭಿಸಿದೆ.

ಕೃಷಿ ಇಲಾಖೆ ರೈತ ಆತ್ಮಹತ್ಯೆ ಪ್ರಕರಣದಲ್ಲಿ ರೈತರ ಕುಟುಂಬದವರಿಗೆ ಪರಿಹಾರ ಧನ ವಿತರಿಸಲಾಯಿತು. ರೇಷ್ಮೆ ಇಲಾಖೆ ವತಿಯಿಂದ 100 ಚದುರ ಅಡಿಯ ರೇಷ್ಮೆ ಮನೆ ನಿರ್ಮಾಣಕ್ಕೆ ಸಹಾಯಧನ ಆಯ್ಕೆಯಾದ ರೈತರಿಗೆ ಧನ ಸಹಾಯದ ಚೆಕ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಜಿಲ್ಲಾ ಪಂಚಾಯತಿ ಅಭಿವೃದ್ಧಿ ಹಾಗೂ ಅರ್ನಿಬಂಧಿತ ಅನುದಾನ, ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ಅನುದಾನದಡಿ 16 ಫಲಾನುಭವಿಗಳಿಗೆ ತ್ರಿಚಕ್ರವಾಹನ ವಿತರಿಸಲಾಯಿತು. ಅಹವಾಲುಗಳ ಸ್ವೀಕಾರಕ್ಕಾಗಿ ತ.ರಾ.ಸು. ರಂಗಮಂದಿರದಲ್ಲಿ 4 ಕೌಂಟರ್‌ಗಳನ್ನು ತೆರೆಯಲಾಗಿತ್ತು. ಆರೋಗ್ಯ ಇಲಾಖೆ ವತಿಯಿಂದ ಸ್ಥಳದಲ್ಲಿಯೇ ಕೌಂಟರ್ ತೆರೆದು ಆಯುಷ್ಮಾನ್ ಆರೋಗ್ಯ ಕರ್ನಾಟಕ ಕಾರ್ಡುಗಳನ್ನು ಸಾರ್ವಜನಿಕರಿಗೆ ಮುದ್ರಿಸಿಕೊಡಲಾಯಿತು.

ಜಿ.ಪಂ. ಸಿಇಓ ಎಸ್.ಜಿ. ಸೋಮಶೇಖರ್, ಉಪವಿಭಾಗಧಿಕಾರಿ ಎಂ.ಕಾರ್ತೀಕ್, ತಹಶೀಲ್ದಾರ್ ಡಾ.ನಾಗವೇಣಿ, ತಾ.ಪಂ. ಇ.ಓ ಹನುಮಂತಪ್ಪ, ನಗರಸಭೆ ಪೌರಾಯುಕ್ತೆ ರೇಣುಕಾ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಚಿತ್ರದುರ್ಗದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಈ ಮೊದಲು ಪಿಯುಸಿ ವಿಜ್ಞಾನ ತರಗತಿಗೆ ಪ್ರವೇಶಕ್ಕೆ ಅವಕಾಶವಿತ್ತು, ಆದರೆ ಈಗ ಇಲ್ಲ, ಸದ್ಯ ನಗರದಲ್ಲಿ ಕೇವಲ 02 ಸರ್ಕಾರಿ ಕಾಲೇಜಲ್ಲಿ ಮಾತ್ರ ಪಿಯುಸಿ ವಿಜ್ಞಾನ ತರಗತಿಗೆ ಪ್ರವೇಶಕ್ಕೆ ಅವಕಾಶವಿದೆ,

ಇದರಿಂದ ಸುತ್ತಮುತ್ತಲ ಗ್ರಾಮಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗಿದೆ, ಈ ಮೊದಲಿನಂತೆಯೇ ಸರ್ಕಾರಿ ವಿಜ್ಞಾನ ಕಾಲೇಜಲ್ಲಿ ಪಿಯುಸಿ ತರಗತಿಗೆ ಪ್ರವೇಶಕ್ಕೆ ಅವಕಾಶ ಕಲ್ಪಿಸುವಂತೆ ಸಾರ್ವಜನಿಕರು ಕೋರಿದರು. ಚಿತ್ರದುರ್ಗ ನಗರದ ಪ್ರಮುಖ ಬಿ.ಡಿ. ರಸ್ತೆ ಹಾಗೂ ತುರುವನೂರು ರಸ್ತೆಯಲ್ಲಿ ಫುಟ್‌ಪಾತ್‌ಗಳನ್ನು ಅಂಗಡಿಕಾರರೇ ಬಳಸುತ್ತಿದ್ದಾರೆ, ಪಾದಚಾರಿಗಳು ಓಡಾಡಲು ಅವಕಾಶವಾಗುತ್ತಿಲ್ಲ,

ನಗರದ ತ.ರಾ.ಸು. ರಂಗಮಂದಿರದ ಶೌಚಾಲಯಗಳು ಹಾಳಾಗಿದ್ದು, ಸರಿಪಡಿಸಬೇಕಿದೆ, ನಗರದ ರಾಜಕಾಲುವೆಗಳು ಒತ್ತುವಾರಿಯಾಗಿದ್ದು, ತೆರವಿಗೆ ನಗರಸಭೆ ಕ್ರಮ ಕೈಗೊಳ್ಳಬೇಕು, ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರು ಸಮಸ್ಯೆ, ಜಮೀನಿನ ಸರ್ವೆ ಮಾಡಿಕೊಡುವುದು, ನಿವೇಶನ ಹಾಗೂ ಮನೆ ಕೋರಿಕೆ ಸೇರಿದಂತೆ ವಿವಿಧ ಅಹವಾಲುಗಳು ಸಲ್ಲಿಕೆಯಾದವು. ಜನತಾದರ್ಶನದಲ್ಲಿ ಸಾರ್ವಜನಿಕರಿಂದ ವಿವಿಧ ಅಹವಾಲುಗಳಿಗೆ ಸಂಬಂಧಿಸಿದಂತೆ ಸುಮಾರು 230 ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾದವು.

## ಫಾಸ್ಟ್ ನ್ಯೂಸ್

### ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲಿ ಗುಣಮಟ್ಟದ ಲಾರ್ವ ಸಮೀಕ್ಷೆ ಮಾಡಿ: ಡಿಹೆಚ್ಒ. ರೇಣುಪ್ರಸಾದ್

» ಚಿತ್ರದುರ್ಗ

ಡೆಂಗಿ ಮತ್ತು ಚಿಕನ್‌ಗುನ್ಯ ಇತರೆ ಸಾಂಕ್ರಾಮಿಕ ರೋಗಗಳ ಹತೋಟಿ ಮತ್ತು ನಿರ್ಮೂಲನೆ ಮಾಡಲು ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲಿ ಗುಣಮಟ್ಟದ ಲಾರ್ವ ಸಮೀಕ್ಷೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಜಿ.ಪಿ. ರೇಣುಪ್ರಸಾದ್ ಹೇಳಿದರು. ನಗರದ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೋಗವಾಹಕ ಅಶ್ರಿತ ರೋಗಗಳ ನಿಯಂತ್ರಣ ಕಚೇರಿ ವತಿಯಿಂದ ಆಯೋಜಿಸಿದ್ದ ಆರೋಗ್ಯ ನಿರೀಕ್ಷಣಾಧಿಕಾರಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ 2 ದಿನಗಳ ಡೆಂಗಿ ಮತ್ತು ಚಿಕುನ್‌ಗುನ್ಯ ಹಾಗೂ ಇತರೆ ಕೀಟಜನ್ಯ ರೋಗಗಳ ಕುರಿತು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹೆಚ್ಚು ಹೆಚ್ಚು ಪರೀಕ್ಷೆ ಮತ್ತು ಸೂಕ್ತ ಚಿಕಿತ್ಸೆ ನೀಡುವುದು ಹಾಗೂ ಸಾರ್ವಜನಿಕರಿಗೆ ಮಂಜಾಗ್ರತೆ ಕ್ರಮಗಳನ್ನು ಅನುಸರಿಸುವಂತೆ ಆರೋಗ್ಯ ಶಿಕ್ಷಣ ನೀಡಿ ರೋಗವನ್ನು ಹತೋಟಿಗೆ ತರುವಂತೆ ಕರೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ರೋಗಾವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಎನ್.ಕಾಶಿ, ಜಿಲ್ಲಾ ಕೀಟ ಶಾಸ್ತ್ರಜ್ಞರಾದ ನಂದಿನಿ ಕಡಿ, ಕರಿಯಣ್ಣ, ಜಿಲ್ಲಾ ತರಬೇತಿ ಕೇಂದ್ರದ ಅರೋಗ್ಯ ಮೇಲ್ವಿಚಾರಕರಾದ ಟಿ. ಮಲ್ಲಿಕಾರ್ಜುನ್, ಬಿ.ಶ್ರೀನಿವಾಸ್, ಆರ್. ನಾಗರಾಜ್, ಹೆಚ್. ಎ.ನಾಗರಾಜ್, ಲೋಕೇಶ್, ಪಾಂಡುಸೇರಿದಂತೆಅರೋಗ್ಯನಿರೀಕ್ಷಣಾಧಿಕಾರಿಗಳು ಹಾಗೂ ಕಚೇರಿಯ ಸಿಬ್ಬಂದಿ ಇದ್ದರು.

### ಖಾಲಿ ನಿವೇಶನದಲ್ಲಿ ಸ್ವಚ್ಛತೆ ಕಾಪಾಡಿ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆಯ ವ್ಯಾಪ್ತಿಯಲ್ಲಿ ಇರುವ ಖಾಲಿ ನಿವೇಶನದಲ್ಲಿ ಪಾರ್ಥೇನಿಯಂ, ಜಾಲಿ ಗಿಡ ಬೆಳೆದಿದ್ದು ಹಾಗೂ ಅಕ್ಕ-ಪಕ್ಕದ ಮನೆಯಿಂದ ಉತ್ಪತ್ತಿಯಾಗುವ ತ್ಯಾಜ್ಯ(ಕಸ) ವನ್ನು ನಿವೇಶನದಲ್ಲಿ ಸುರಿಯುತ್ತಿದ್ದು, ಅಲ್ಲಿ ಕಸ ಸಂಗ್ರಹವಾಗುತ್ತಿರುತ್ತದೆ ಮತ್ತು ಖಾಲಿ ಜಾಗದಲ್ಲಿ ಬಿಡಾಡಿ ದನಗಳ, ಹಂದಿಗಳು, ನಾಯಿಗಳು ಇತರೆ ವಿಷಜಂತುಗಳ ವಾಸಸ್ಥಾನವಾಗಿರುತ್ತದೆ. ತಮ್ಮ ಖಾಲಿ ನಿವೇಶನಗಳಲ್ಲಿ ಮಳೆನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗಿ ಮಲೇರಿಯಾ, ಡೆಂಗ್ಯೂ, ಚಿಕನ್‌ಗುನ್ಯ ಸೇರಿದಂತೆ ಇನ್ನಿತರೆ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುತ್ತದೆ ಹಾಗೂ ಸೌಂದರ್ಯಕ್ಕೂ ಸಹ ಧಕ್ಕೆ ಉಂಟಾಗಿರುತ್ತದೆ. ಆದ ಕಾರಣ ತಮ್ಮ ಖಾಲಿ ನಿವೇಶನಗಳಲ್ಲಿ ತ್ಯಾಜ್ಯವನ್ನು, ಗಿಡ ಗಂಟೆಗಳನ್ನು ತೆರವುಗೊಳಿಸಿ ಸ್ವಚ್ಛಗೊಳಿಸಬೇಕು ಹಾಗೂ ತಮ್ಮ ನಿವೇಶನಕ್ಕೆ ಕಾಂಪೌಂಡ್, ಫೆನ್ಸಿಂಗ್ ನಿರ್ಮಿಸಿಕೊಳ್ಳಬೇಕು ತಪ್ಪಿದ್ದಲ್ಲಿ ಕರ್ನಾಟಕ ಇದರ ಅನ್ವಯ ಹಾಗೂ ಕರ್ನಾಟಕ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕಾಯ್ದೆ 2020ರ ಅನ್ವಯ ನಿಮ್ಮ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆರೋಗ್ಯ ಶಾಖೆ ಸಂಪರ್ಕಿಸಬಹುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಿ.ಎಂ ವಿಶ್ವಕರ್ಮ ಯೋಜನೆ ಸೌಲಭ್ಯ: ಅರ್ಜಿ ಆಹ್ವಾನ

» ಚಿತ್ರದುರ್ಗ

ಗ್ರಾಮ, ನಗರ ಮಟ್ಟದಲ್ಲಿನ ವಿವಿಧ ವೃತ್ತಿಗಳಲ್ಲಿ ತೊಡಗಿಸಿಕೊಂಡಿರುವವೃತ್ತಿಪರಕುಶಲಕರ್ಮಿಗಳಿಗೆ ಪಿ.ಎಂ.ವಿಶ್ವಕರ್ಮ ಯೋಜನೆಯ ಸೌಲಭ್ಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯ ಸೌಲಭ್ಯ ಪಡೆಯಲು ಗ್ರಾಮ ಮತ್ತು ನಗರವಾರು ಬಡಿಗ ವೃತ್ತಿ ಮಾಡುವವರು, ದೋಣಿ ತಯಾರಿಸುವವರು,ಶಸ್ತ್ರತಯಾರಕರು,ಕಮ್ಮಾರವೃತ್ತಿ ಮಾಡುವವರು, ಕಲ್ಲುಕುಟಗ ವೃತ್ತಿ ಮಾಡುವವರು, ಬಟ್ಟೆ ಚಾಪೆ-ಕಸ ಪೊರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಕರು(ಸಂಪ್ರದಾಯಿಕ) ಕ್ಷೌರಿಕ ವೃತ್ತಿ ಮಾಡುವವರು, ಸುತ್ತಿಗೆ ಮತ್ತು ಉಪಕರಣಗಳನ್ನು ತಯಾರಿಸುವವರು, ಹೂಮಲೆ ತಯಾರಕರು, ಅಗಸರು(ದೋಬಿ, ಆಭರಣ ತಯಾರಕರು, ಶಿಂಪಿಗ(ಬಟ್ಟೆ ಹೊಲೆಯುವರು), ಕುಂಬಾರ ವೃತ್ತಿ ಮಾಡುವವರು, ಮೀನು ಬಲೆ ಹೆಣೆಯುವವರು, ಶಿಲ್ಪಿ(ಮೂರ್ತಿ ಮತ್ತು ಕಲ್ಲಿನ ಕೆತ್ತನೆ) ಚಮ್ಮಾರ ಪಾದರಕ್ಷೆ ತಯಾರಕರು, ಬೀಗ ತಯಾರಿಕ ಕುಶಲಕರ್ಮಿಗಳು ಹೆಚ್ಚಿನ ಸಂಖ್ಯೆಯಲ್ಲಿ https://pmvishwakarma.gov.in ವೆಬ್‌ಸೈಟ್ ನಲ್ಲಿ ಸ್ಥಳೀಯ ಸಾಮಾನ್ಯ ಸೇವಾ ಕೇಂದ್ರಗಳ, ಸಿ.ಎಸ್.ಸಿ. ಕೇಂದ್ರಗಳ ಮೂಲಕ ನೋಂದಾಯಿಸಿಕೊಂಡು ಯೋಜನೆ ಸೌಲಭ್ಯ ಪಡೆದುಕೊಳ್ಳಿ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಯ ದಾಖಲಾತಿ: ಆಧಾರ್, ಪಾನ್, ರೇಷನ್ ಕಾರ್ಡ್, ಆಧಾರ್ ಲಿಂಕೆಡ್ ಮೊಬೈಲ್ ನಂಬರ್, ಬ್ಯಾಂಕ್ ಪಾಸ್‌ಬುಕ್ ಜೊತೆಗೆ ಅರ್ಜಿದಾರರೇ ಖುದ್ದಾಗಿ ಅರ್ಜಿ ಸಲ್ಲಿಸಬೇಕು.

ಪ್ರವಾಸಿ ಮಾರ್ಗದರ್ಶಿಗಳಿಗೆ ಪುನಶ್ಚೇತನ ತರಬೇತಿ

# ಕೋವಿಡ್ ನಂತರ ಪ್ರವಾಸೋದ್ಯಮ ಚೇತರಿಕೆ

» ಚಿತ್ರದುರ್ಗ

ಪ್ರಸ್ತುತ ದಿನಗಳಲ್ಲಿ ಪ್ರವಾಸಿಗರ ನಿರೀಕ್ಷೆಯು ತುಂಬಾ ಜಾಸ್ತಿಯಾಗಿದ್ದು, ಪ್ರವಾಸಿಗರ ನಿರೀಕ್ಷೆಗೆ ತಕ್ಕಂತೆ ಪ್ರವಾಸಿ ಮಾರ್ಗದರ್ಶಿಗಳು ಸೇವೆ ನೀಡಬೇಕು ಎಂದು ಮೈಸೂರಿನ ಫುಡ್ ಕ್ರಾಫ್ಟ್ ಇನ್ಸಿಟಿಟ್ಯೂಟ್‌ನ ಪ್ರಾಂಶುಪಾಲ ಡಾ.ಎಸ್. ಕಣ್ಣನ್ ಹೇಳಿದರು.

ನಗರದ ಹೋಟೆಲ್ ಮಯೂರ ದುರ್ಗದಲ್ಲಿ ಮಂಗಳವಾರ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ ವತಿಯಿಂದ ಪ್ರವಾಸೋದ್ಯಮ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೆಂಗಳೂರು ವಿಭಾಗದ ಪ್ರವಾಸಿ ಮಾರ್ಗದರ್ಶಿಗಳಿಗೆ ಪುನಶ್ಚೇತನ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೋವಿಡ್-19ರ ಸಾಂಕ್ರಾಮಿಕ ರೋಗದ ನಂತರ ಪ್ರವಾಸೋದ್ಯಮ ಇದೀಗ ಚೇತರಿಸಿಕೊಳ್ಳುತ್ತಿದ್ದು, ಪ್ರವಾಸಿಗರ ನಿರೀಕ್ಷೆಗೆ ಅನುಗುಣವಾಗಿ ಪ್ರವಾಸಿ ಮಾರ್ಗದರ್ಶಿಗಳು ಸೇವೆ ಒದಗಿಸಬೇಕು. ಇಂಗ್ಲಿಷ್, ಹಿಂದಿ ಭಾಷಾ ಸಾಮಾರ್ಥ್ಯ ಹಾಗೂ ಫಾರಿನ್ ಇಂಗ್ಲಿಷ್ ಭಾಷೆಯಲ್ಲಿ ನಿರರ್ಗಳವಾಗಿ ಮಾತನಾಡಬೇಕು.





ನೀವುಗಳು ಕೊಡುವ ಮಾಹಿತಿಯ ಆಧಾರದ ಮೇಲೆ ಪ್ರವಾಸಿಗರು ಫೀಡ್‌ಬ್ಯಾಕ್ ನೀಡಲಿದ್ದಾರೆ ಎಂದರು.

ದಾವಣಗೆರೆ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಎಲ್.ಪಿ.ಮಧು ಮಾತನಾಡಿ, ಪ್ರವಾಸೋದ್ಯಮ ಇಲಾಖೆ ಪ್ರತಿಬಿಂಬ ಪ್ರವಾಸಿ ಮಾರ್ಗದರ್ಶಿಗಳಾಗಿದ್ದು, ಪ್ರವಾಸಿ ಮಾರ್ಗದರ್ಶಿಗಳು ಪ್ರತಿ ದಿನ ಹೊಸ ಹೊಸ ವಿಷಯಗಳನ್ನು ಕಲಿಯಬೇಕು. ಎಷ್ಟು ವಿಷಯ ತಿಳಿದುಕೊಂಡರೂ ಇನ್ನೂ ತಿಳಿದುಕೊಳ್ಳಬೇಕು ಎಂಬ ಆಸಕ್ತಿ ಪ್ರವಾಸಿ ಮಾರ್ಗದರ್ಶಿಗಳಿಗೆ ಇರಬೇಕು ಎಂದು ಹೇಳಿದರು.

ಚಿತ್ರದುರ್ಗ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಜಿತೇಂದ್ರನಾಥ್ ಮಾತನಾಡಿ, ಪ್ರವಾಸಿ ತಾಣಗಳ ಕುರಿತು ಯಾವ ರೀತಿಯಾಗಿ ಪ್ರವಾಸಿಗರಿಗೆ ಮಾಹಿತಿ ನೀಡಬೇಕು ಎಂಬುವುದರ ಕುರಿತು ಪ್ರವಾಸಿ ಮಾರ್ಗದರ್ಶಿಗಳಿಗೆ ಪುನಶ್ಚೇತನ ತರಬೇತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಈ ತರಬೇತಿಯು ಅಕ್ಟೋಬರ್ 9 ರವರೆಗೆ ಒಟ್ಟು 7 ದಿನಗಳ ಕಾಲ ನಡೆಯಲಿದೆ ಎಂದು ತಿಳಿಸಿದ ಅವರು, ಈ ತರಬೇತಿಯಲ್ಲಿ ಪ್ರವಾಸಿ ಮಾರ್ಗದರ್ಶಿಗಳು ತಮ್ಮ ಕುಂದು ಕೊರತೆಗಳ ಬಗ್ಗೆಯೂ ತಿಳಿಸಬಹುದು ಎಂದು ಹೇಳಿದರು.ಪ್ರವಾಸಿ ಮಾರ್ಗದರ್ಶಿಗಳು ಪ್ರವಾಸಿ ತಾಣಗಳ ಬಗ್ಗೆ ಪ್ರವಾಸಿಗರಿಗೆ ಹೆಚ್ಚಿನ ಮಾಹಿತಿ ನೀಡಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಹಿರಿಯ ಪ್ರವಾಸಿ ಮಾರ್ಗದರ್ಶಿಗಳಾದ ದೀನ್‌ನಾಥ್, ಮೊಹಿದ್ದೀನ್ ಖಾನ್ ಅವರು ತಮ್ಮ ಅನುಭವಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಮೈಸೂರಿನ ಫುಡ್ ಕ್ರಾಫ್ಟ್ ಇನ್ಸಿಟಿಟ್ಯೂಟ್‌ನ ಉಪನ್ಯಾಸಕ ಯತೀಶ್ ಬಾಬು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಎಸ್.ಕೆ.ಮಂಜುನಾಥ್ ಸೇರಿದಂತೆ ಬೆಂಗಳೂರು ವಿಭಾಗದ ಪ್ರವಾಸಿ ಮಾರ್ಗದರ್ಶಿಗಳು ಇದ್ದರು.

## ಮಕ್ಕಳು, ತಾಯಂದಿರ ಮರಣ ಪ್ರಮಾಣ ತಗ್ಗಿಸಲು ಅಗತ್ಯ ಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ

» ದಾವಣಗೆರೆ

ಮಕ್ಕಳು ಮತ್ತು ತಾಯಂದಿರ ಮರಣ ಪ್ರಮಾಣ ತಗ್ಗಿಸುವ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಬೇಕು. ಮಿಷನ್ ಇಂದ್ರಧನುಷ್ ಅಭಿಯಾನದ ಕೊನೆಯ ಹಂತವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ 3 ನೇ ಸುತ್ತಿನ ಮಿಷನ್ ಇಂದ್ರಧನುಷ್ 5.0 (ಖಒಖ) ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ತುಂಬು ಗರ್ಭಿಣಿಯರಿಗೆ ತುರ್ತು ಸಂದರ್ಭದಲ್ಲಿ ವೆಂಟಿಲೇಟರ್ ವ್ಯವಸ್ಥೆ, ಬಿ.ಪಿ, ಮಧುಮೇಹ ಪರೀಕ್ಷೆ, ಅಗತ್ಯ ಔಷಧಿ ಹಾಗೂ ಚಿಕಿತ್ಸೆ ನೀಡಬೇಕು.ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಇಂದ್ರಧನುಷ್ ಅಭಿಯಾನವು ಪರಿಣಾಮಕಾರಿಯಾಗಿ ಕಾರ್ಯಗತಗೊಳ್ಳಬೇಕು. ನಗರದ ವಿವಿಧ ಭಾಗಗಳಲ್ಲಿ ಪೋಷಕರೇ ಮಕ್ಕಳಿಗೆ ಲಸಿಕೆ ಹಾಕಿಸಲು ಹಿಂದೆ ಸರಿಯುತ್ತಿದ್ದು, ದಾವಣಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ 44 ಮಕ್ಕಳು ಲಸಿಕೆಯಿಂದ ವಂಚಿತರಾಗಿರುವುದರಿಂದ ಲಸಿಕೆ ಕುರಿತು ಪೋಷಕರಲ್ಲಿ ಸಂಪೂರ್ಣವಾದ ಮಾಹಿತಿ ನೀಡಿ ಮಕ್ಕಳಿಗೆ ಲಸಿಕೆ ನೀಡಬೇಕು ಎಂದರು.ಮೂರನೇ ಸುತ್ತಿನ ಮಿಷನ್ ಇಂದ್ರಧನುಷ್ ಅಭಿಯಾನವು ಅಕ್ಟೋಬರ್ 9 ರಿಂದ 14ರ ವರೆಗೆ ನಡೆಯಲಿದ್ದು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತರಿಗೆ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ತರ ಬೇತಿ ನೀಡಬೇಕು. ನಿಗಧಿತ ಸಮಯದಲ್ಲಿ ರೋಗಿಗಳ ತುರ್ತು ಚಿಕಿತ್ಸೆಗಾಗಿ 108 ಆಂಬುಲೆನ್ಸ್ ಸೇವೆಯನ್ನು ಬಳಸಿಕೊಳ್ಳು ವಂತೆ ಜನರಲ್ಲಿ ಜಾಗೃತಿ ಮೂಡಿಸಬೇಕು.



ನಗರದಲ್ಲಿ ಕಾನೂನು ಬಾಹಿರವಾಗಿ ಧೂಮಪಾನ ಹಾಗೂ ಮದ್ಯಪಾನ ಸೇವನೆ ಮಾಡುತ್ತಿದ್ದು ಅಂತವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಜಿಲ್ಲಾಸ್ಪತ್ರೆಯ ಡಯಾಲಿಸಿಸ್ ಕೇಂದ್ರದಲ್ಲಿ ರೋಗಿಗಳಿಗೆ ಫ್ಯಾನ್, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ ಅವರಿಗೆ ಸೂಕ್ತ ವಾತಾವರಣವನ್ನು ಕಲ್ಪಿಸಬೇಕು.

ನಗರದಲ್ಲಿಮೆಡಿಕಲ್‌ಹಾಗೂಇಂಜಿನಿಯರಿಂಗ್ ವಿದ್ಯಾರ್ಥಿಗಳೇ ಗಾಂಜಾ ಅಥವಾ ಇತರೆ ಮಾದಕ ವಸ್ತುಗಳಿಗೆ ಹೆಚ್ಚು ಆಕರ್ಷಿತರಾಗಿ ಬಲಿಯಾಗುತ್ತಿದ್ದಾರೆ. ಕಾಲೇಜುಗಳಲ್ಲಿ ಕೌನ್ಸಿಲಿಂಗ್ ನಡೆಸಿ ಮಾದಕ ವಸ್ತುಗಳಿಂದ ವಿದ್ಯಾರ್ಥಿಗಳನ್ನು ಮುಕ್ತಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಷಣ್ಮುಖಪ್ಪ. ಎಸ್, ಆರ್.ಸಿ.ಹೆಚ್ ಅಧಿಕಾರಿ ಡಾ. ರೇಣುಕಾರಾಧ್ಯ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ನಾಗೇಂದ್ರಪ್ಪ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆರೋಗ್ಯ ವೈದ್ಯಾಧಿಕಾರಿಗಳು ಹಾಗೂ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು ಉಪಸ್ಥಿಸರಿದ್ದರು.

## ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ವತಿಯಿಂದ ಗಾಂಧಿಜಯಂತಿ



» ಚಳ್ಳಕೆರೆ

ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ನಗರದ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಬ್ರೆಡ್, ಹಣ್ಣು ವಿತರಿಸುವ ಮೂಲಕ ಗಾಂಧಿ ಜಯಂತಿ ಸರಳವಾಗಿ ಆಚರಣೆ ಮಾಡಲಾಯಿತು ಎಂದು ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಎಸ್.ಬಿ.ತಿಪ್ಪೇಸ್ವಾಮಿ ತಿಳಿಸಿದರು. ಅವರು, ಗಾಂಧಿ ಜಯಂತಿ ಹಿನ್ನೆಲೆಯಲ್ಲಿ ನಗರದ ಬನಶ್ರೀವೃದ್ದಾಶ್ರಮದಲ್ಲೂ ಸಹ ಬ್ರೆಡ್, ಹಣ್ಣು, ಹಾಲು ವಿತರಿಸಿದರು. ಪ್ರತಿವರ್ಷವೂ ಗಾಂಧಿ ಜಯಂತಿ ಸೇರಿದಂತೆ ಮಹಾತ್ಮರ ಜಯಂತಿ ಕಾರ್ಯಕ್ರಮದಲ್ಲಿ ಇಂತಹ ಚಟುವಟಿಕೆಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದರು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಕಾಶಿ, ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘ ರಾಜ್ಯದ ವಿವಿಧ ಜಿಲ್ಲೆ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಈ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸ ವಿಷಯ. ಇಲ್ಲಿನ ಆಸ್ಪತ್ರೆಯೂ ಸೇರಿದಂತೆ ವೃದ್ದಾಶ್ರಮಕ್ಕೆ ಸುಮಾರು ನೂರಾರು ಜನರಿಗೆ ಬ್ರೆಡ್, ಹಣ್ಣು, ಹಾಲು ವಿತರಿಸಲಾಗಿದೆ. ಆರೋಗ್ಯ ನಿರೀಕ್ಷಣಾಧಿಕಾರಿಗಳ ನಿರಂತರ ಪರಿಶ್ರಮದಿಂದ ಆರೋಗ್ಯ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು ಹಲವಾರು ರೋಗಗಳನ್ನುನಿಯಂತ್ರಿಸಲು ಇಲಾಖೆ ಸಫಲವಾಗಿದೆ ಎಂದರು. ಗೌರವಾಧ್ಯಕ್ಷ ಸುಧಾಕರರೆಡ್ಡಿ, ತಾಲ್ಲೂಕು ಅಧ್ಯಕ್ಷ ಬಸವರಾಜು, ಕಾರ್ಯದರ್ಶಿ ಬಿ.ಎಚ್.ರಾಜು, ಸಂಘಟನಾ ಕಾರ್ಯದರ್ಶಿ ಭೀಮಾರೆಡ್ಡಿ, ರಂಗಪ್ಪ, ರಾಮಚಂದ್ರಪ್ಪ, ಮಂಜುನಾಥ, ಸತೀಶ್, ರಮೇಶ್, ಕೀರ್ತಿ, ಗಾಯಿತ್ರಿ, ಶೇಷಾದ್ರಿನಾಯಕ, ಲೋಕನಾಥ, ದಯಾನಂದ, ಎಚ್.ತಿಪ್ಪೇಸ್ವಾಮಿ, ಅಶೋಕ್, ತಿಪ್ಪೀರಮ್ಮ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



**ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕಿ ಸಿಂಧು ಬಿ.ರೂಪೇಶ್‌ರವರನ್ನು ಬೆಂಗಳೂರಿನ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿಗಳ ಸಭೆಯಲ್ಲಿ ಚಳ್ಳಕೆರೆಯ ಎನ್‌ಎಸ್‌ಎಸ್ ಅಧಿಕಾರಿ ಶಾಂತಕುಮಾರಿ ಸನ್ಮಾನಿಸಿದರು.**

## ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಸಭೆ

**ದಾವಣಗೆರೆ:** ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಅಕ್ಟೋಬರ್ 26 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಸಭೆಯನ್ನು ಏರ್ಪಡಿಸಲಾಗಿದೆ. ರಹದಾರಿಗೆ ಅರ್ಜಿ ಸಲ್ಲಿಸಲು ಅಕ್ಟೋಬರ್ 13 ಕೊನೆಯ ದಿನವಾಗಿದ್ದು, ನಂತರ ಬಂದ ಅರ್ಜಿಗಳನ್ನು ಸಭೆಯಲ್ಲಿ ಮಂಡಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಿದ ರಹದಾರಿದಾರರು ಸಭೆಯಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಬೇಕು ಎಂದು ದಾವಣಗೆರೆ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿ ಶ್ರೀಧರ್ ತಿಳಿಸಿದ್ದಾರೆ.

ಪ್ರಮುಖ ಸುದ್ದಿ

# ಯಶಸ್ವಿ ಉದ್ಯಮಶೀಲರಾಗುವ ಮೂಲಕ ಆರ್ಥಿಕ ಸಬಲತೆ ಸಾಧಿಸಿ

» ಚಿತ್ರದುರ್ಗ

ಯುವಜನತೆಯಶಸ್ವಿಉದ್ಯಮಶೀಲರಾಗುವ ಮೂಲಕ ಆರ್ಥಿಕವಾಗಿ ಸಬಲರಾಗಿ, ರಾಷ್ಟ್ರದ ಆರ್ಥಿಕತೆಗೆ ಕೊಡುವಂತಾಗಲಿ ಎಂದು ಸಿಡಾಕ್ ಸಂಸ್ಥೆಯ ಜಂಟಿ ನಿರ್ದೇಶಕ ಆರ್.ಪಿ. ಪಾಟೀಲ್ ಶಿಬಿರಾರ್ಥಿಗಳಿಗೆ ಸಲಹೆ ನೀಡಿದರು.

ನಗರದ ವಿಕ್ಟೋರಿ ಉಮೆನ್ಸ್ ವೆಲ್ಫರ್ ಸೋಸೈಟಿಯಲ್ಲಿ ಆಯೋಜಿಸಿದ್ದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ವಿಕ್ಟೋರಿ ಉಮೆನ್ಸ್ ವೆಲ್ಫರ್ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜನಸಂಖ್ಯಾಸ್ಫೋಟ ಹಾಗೂಅದರಿಂದುಂಟಾಗುದ ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ(ಇಂದಿನ ಯುವಜನತೆಸ್ವಯಂ ಉದ್ಯಮವನ್ನು ಸ್ಥಾಪಿಸಲು) ಸ್ವಯಂ ಉದ್ಯಮ ಸ್ಥಾಪನೆ



ಪರಿಹಾರವಾಗಬಹುದೆಂದು ಸರ್ಕಾರ ಈ ತರಹದ ತರಬೇತಿ ಕಾರ್ಯಕ್ರಮಗಳನ್ನು ಪ್ರಾಯೋಜಿಸುತ್ತದೆ ಎಂದರು. ರಾಜ್ಯದಾದ್ಯಂತ ಉದ್ಯಮಶೀಲತೆ ಅಭಿವೃದ್ಧಿ ಪಡಿಸಲು ಸರ್ಕಾರದಿಂದ ಸ್ಥಾಪಿತವಾಗಿರುವ ಸಿಡಾಕ್ ಸಂಸ್ಥೆಯು ಉದ್ಯಮಶೀಲತೆಯು ಹುಟ್ಟಿನಿಂದ ಮಾತ್ರ ಬರಬೇಕಾಗಿಲ್ಲ, ತರಬೇತಿಯ ಮೂಲಕ ಸಾಮಾನ್ಯ ಜನರಲ್ಲೂ ಉದ್ಯಮಶೀಲತೆಯನ್ನು ಉದ್ದೀಪನೆಗೊಳಿಸಬಹುದು ಎಂಬ ತತ್ವದೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು. ಇಂದಿನ ಕಾರ್ಯಕ್ರಮದಲ್ಲಿ ಉದ್ಯಮಶೀಲತೆ ಎಂದರೇನು, ಮಹಿಳೆಯರಿಗಾಗಿ ಇರುವ ಉದ್ಯಮಾವಕಾಶಗಳ ಮಾಹಿತಿ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸ್ವಯಂ ಉದ್ಯಮ ಸ್ಥಾಪಿಸಲು ಸಹಕರಿಸುವ ಯೋಜನೆಗಳ ಮಾಹಿತಿ, ಸಮರ್ಪಕ ಮಾಹಿತಿಗಾಗಿ ಸಂಪರ್ಕಿಸಬೇಕಾದ ಇಲಾಖೆಗಳ ಮಾಹಿತಿಯನ್ನು ಪರಿಣಿತ ಅತಿಥಿ ಭೋಧಕ ಓಬಳೇಶ್ ಅವರು ನೀಡಲಿದ್ದಾರೆ. ಈ ತರಬೇತಿಯಲ್ಲಿ ಆಸಕ್ತಿಯಿಂದ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳಿ ಎಂದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ಎಸ್.ತಿಪ್ಪೇಶ್ ಮಾತನಾಡಿ, ಉದ್ಯಮದಾರರಬೇಕೆಂಬ ಹಂಬಲದಿಂದ ತರಬೇತಿ ಪಡೆಯಲು ಆಗಮಿಸಿರುವ ಎಲ್ಲಾ ಶಿಬಿರಾರ್ಥಿಗಳನ್ನು ಅಭಿನಂದಿಸಿದ ಅವರು, ಉದ್ಯಮದಾರರಾಗುವ ಹಂತದಲ್ಲಿ ಎದುರಿಸಬೇಕಾದ ಪ್ರಮುಖ ವಿಚಾರಗಳ ಬಗ್ಗೆ ತಿಳಿಸಿ ಸಲಹೆಗಳನ್ನು ನೀಡಿದರು.ಬ್ಯಾಂಕಿನಿಂದ ಸಾಲ ಸೌಲಭ್ಯ ಪಡೆಯುವಲ್ಲಿ ಎದುರಿಸಬೇಕಾದ ವಿವಿಧ ಹಂತಗಳ ಬಗ್ಗೆ ಮಾಹಿತಿ ಹಾಗೂ ಸಲಹೆಗಳನ್ನು ನೀಡುವ ಮೂಲಕ ಶಿಬಿರಾರ್ಥಿಗಳನ್ನು ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ವಿಕ್ಟೋರಿ ಉಮೆನ್ಸ್ ವೆಲ್ಫರ್ ಸೊಸೈಟಿಯ ಅಧ್ಯಕ್ಷ ಅಕ್ತರ್ ಉನ್ನಿಸ, ಸಂಪನ್ಮೂಲ ವ್ಯಕ್ತಿಯಾಗಿ ಓಬಳೇಶ್, ತರಬೇತಿದಾರ ಪಿ. ವಿಜಯ ಕುಮಾರ ಶಿಬಿರಾರ್ಥಿಗಳಾದ ರಾಜೇಶ್ವರಿ, ಮೋಹನ್ ಪಿ ಹೆಡ್ಗೆ, ದೇವಿಕಾಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T